BV
ಕನ್ನಡ ದಿನಪತ್ರಿಕೆ
02 ಮಾರ್ಚ್ । ಶನಿವಾರ
02 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 13 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಗ್ರಾಹಕರಿಗೆ ಬಿಗ್ ಶಾಕ್

### ಎಲ್ಪಿಜಿ ಸಿಲಿಂಡರ್ ಬೆಲೆ ಮತ್ತೆ ಏರಿಕೆ



ಬೆಂಗಳೂರು: ಮಾರ್ಚ್ ತಿಂಗಳದ ಆರಂಭದಲ್ಲೇ ಗ್ರಾಹಕರಿಗೆ ತೈಲ ಕಂಪನಿಗಳು ಬಿಗ್ ಶಾಕ್ ನೀಡಿವೆ. ಎಲ್ಪಿಜಿ ಗ್ಯಾಸ್ ಸಿಲಿಂಡರ್ ಬೆಲೆಯನ್ನು ಮತ್ತೆ ಹೆಚ್ಚಿಸಲಾಗಿದ್ದು, ಇಂದಿನಿಂದ ಗ್ಯಾಸ್ ದರ ಮತ್ತಷ್ಟು ಹೆಚ್ಚಾಗಲಿದೆ.

ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ 25 ರೂಪಾಯಿ ಏರಿಕೆಯಾಗಿದೆ. ಸತತ ಎರಡು ತಿಂಗಳಿಂದ 19 ಕೆಜಿಯ ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ ಏರಿಕೆ ಆಗುತ್ತಿದೆ. ಕಳೆದ ತಿಂಗಳ ಬಜೆಟ್ ದಿನದಂದು 14 ರೂಪಾಯಿ ಏರಿಸಲಾಗಿತ್ತು. ಇದೀಗ 25 ರೂಪಾಯಿ ಹೆಚ್ಚಳ ಮಾಡಲಾಗಿದ್ದು, ಹೊಸ ದರದ ಪ್ರಕಾರ ದೆಹಲಿಯಲ್ಲಿ 19 ಕೆ-ಜಿಯ (ವಾಣಿಜ್ಯಕ್ಕೆ ಬಳಸುವ) ಒಂದು ಸಿಲಿಂಡರ್ ಬೆಲೆ 1795 ರೂಪಾಯಿ ಆಗಿದೆ. ಕೋಲ್ಕತ್ತಾದಲ್ಲಿ 1911, ಮುಂಬೈನಲ್ಲಿ 1749 ಹಾಗೂ ಚೆನ್ನೈನಲ್ಲಿ 1960.5 ರೂಪಾಯಿ ಆಗಿದೆ.

ಇನ್ನು ತೈಲ ಕಂಪನಿಗಳು ಗೃಹಬಳಕೆಯ ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ದೆಹಲಿಯಲ್ಲಿ 14 ಕೆ-ಜಿಯ ಎಲ್ಪಿಜಿ ಸಿಲಿಂಡರ್ ಬೆಲೆ 903, ಕೋಲ್ಕತ್ತಾದಲ್ಲಿ 929, ಮುಂಬೈನಲ್ಲಿ 902.50, ಚೆನ್ನೈನಲ್ಲಿ 918.50 ರೂಪಾಯಿ ಇದೆ.

## ರಾಜ್ಯದ ಜನರ ತಲಾ ಆದಾಯದಲ್ಲಿ ಹೆಚ್ಚಳ: ಸಿಎಂ



ಹಾಸನ :ರಾಜ್ಯದಲ್ಲಿ ಜನರ ತಲಾ ಆದಾಯ ಹೆಚ್ಚಳವಾಗಿದೆ. ಜಿಡಿಪಿ ಬೆಳವಣಿಗೆಗೆ ರಾಜ್ಯದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿಂದು ವಿವಿಧ ಇಲಾಖೆಗಳಡಿ ಅನುಷ್ಠಾನಗೊಂಡಿರುವ ಅಭಿವೃದ್ಧಿ ಕಾಮಗಾ-ರಿಗಳ ಉದ್ಘಾಟನೆ ಹಾಗೂ ಹೊಸ ಕಾಮಗಾ-ರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿ, ದೇಶದಲ್ಲಿ ಶೇ.18 ರಷ್ಟು ಜಿಡಿಪಿ ಬೆಳವಣಿಗೆಯಾಗಿ, ದೇಶದ ಅಭಿವೃದ್ಧಿಗೆ ಅತಿ ಹೆಚ್ಚು ಕೊಡುಗೆ ನೀಡಿದ ಪ್ರಥಮ ರಾಜ್ಯ ಕರ್ನಾಟಕವಾಗಿದೆ. ಈ ಬೆಳವಣಿಗೆ ಗ್ಯಾರಂಟಿ ಯೋಜನೆಗಳ ಫಲ ಎಂಬುದನ್ನು ಅಂಕಿ ಅಂಶಗಳೇ ತೋರಿಸುತ್ತವೆ ಎಂದರು.

ಗ್ಯಾರಂಟಿ ಯೋಜನೆಗಳ ಮೂಲಕ ಜನರ ಖಾತೆಗೆ ಬಂದ ಹಣದಿಂದಾಗಿ ಅವರಲ್ಲಿ ಕೊಳ್ಳುವ ಶಕ್ತಿ, ಉಳಿತಾಯದ ಶಕ್ತಿ ಹೆಚ್ಚಾಗಿದೆ. ಇದರ ಒಟ್ಟು ಪರಿಣಾಮ ರಾಜ್ಯದಲ್ಲಿ ಆರ್ಥಿಕ ಚಟುವಟಿಕೆ ತೀವ್ರಗೊಂಡು ಆರ್ಥಿಕ ಪ್ರಗತಿ ಕಂಡಿದೆ.

ಮಹಿಳೆಯರು, ರೈತರು, ಕಾರ್ಮಿಕರು, ಹಿಂದುಳಿದವರು, ದುಡಿಯುವವರು, ಶ್ರಮಿಕರು ಎಲ್ಲರಿಗೂ ಅನುಕೂಲ ಆಗುವ ಜಾತಿ, ಧರ್ಮದ ಮಿತಿ ಇಲ್ಲದ ಕಾರ್ಯಕ್ರಮಗಳನ್ನು ನಾವು ರೂಪಿಸಿ, ಜಾರಿ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನರು ನೆಮ್ಮದಿ ಕಂಡುಕೊಳ್ಳುತ್ತಿದ್ದಾರೆ. ಈ ಫಲಾನುಭವಿಗಳ ಗಮನ ಬೇರೆಡೆ ಸೆಳೆಯಲು ಬಿಜೆಪಿ ನಾನಾ ನಾಟಕಗಳನ್ನು ಸೃಷ್ಟಿಸುತ್ತಿದೆ, ಭರ್ಜರಿ ನಾಟಕ ಆಡುತ್ತಿದೆ. ಬಿಜೆಪಿಯ ಟೀಕೆ, ನಾಟಕಗಳಿಗೆ ಮರುಳಾಗಬೇಡಿ ಎಂದು ಜನರಲ್ಲಿ ಮನವಿ ಮಾಡಿದ ಮುಖ್ಯಮಂತ್ರಿ, ಹಾಸನದ ಸರ್ವಾಂಗೀಣ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಏರ್ ಪೋರ್ಟ್ ನಿರ್ಮಾಣ-ಕ್ಕೆ ರಾಜ್ಯದ ಪಾಲಿನ ಹಣವನ್ನು ನಿರಂತರವಾಗಿ ನೀಡುತ್ತಿದೆ. ಅಭಿವೃದ್ಧಿ ವಿಚಾರದಲ್ಲಿ ಪಕ್ಷ ರಾಜಕಾರಣಕ್ಕೆ ಅವಕಾಶ ಕೊಡದೆ ರಾಜ್ಯದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದರು.



## ಬಿಲ್ ಗೇಟ್ಸ್ ಪ್ರಧಾನಿ ಮೋದಿ ಮಧ್ಯೆ ಮಹತ್ವದ ಚರ್ಚೆ

ಮುಂಬೈ: ಭಾರತ ಪ್ರವಾಸದಲ್ಲಿರುವ ಮೈಕ್ರೋಸಾಫ್ಟ್ ಸಹ ಸಂಸ್ಥಾಪಕ ಬಿಲ್ ಗೇಟ್ಸ್ ಪ್ರಧಾನಿ ನರೇಂದ್ರ ಮೋದಿಯನ್ನು ಭೇಟಿಯಾಗಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಅವರು.. ಪ್ರಧಾನಿ ಮೋದಿಯವರೊಂದಿಗಿನ ಭೇಟಿ ವಿಶೇಷವಾಗಿತ್ತು ಎಂದಿದ್ದಾರೆ.

ಇನ್ನು ಪ್ರಧಾನಿ ಮೋದಿ ಕೂಡ ಬಿಲ್ ಗೇಟ್ಸ್ ಭೇಟಿಯಾಗಿರೋದನ್ನು ಸ್ಮರಣೀಯ ಎಂದು ಬಣ್ಣಿಸಿದ್ದಾರೆ. ಇಬ್ಬರ ನಡುವೆ ಮಹತ್ವದ ವಿಚಾರಗಳ ಕುರಿತು ವಿಸ್ತೃತ ಚರ್ಚೆ ನಡೆದಿದೆ. ನಾನು ನರೇಂದ್ರ ಮೋದಿ ಅವರನ್ನು ಭೇಟಿಯಾಗಲು ಯಾವಾಗಲೂ ಪ್ರೇರೇಪಿತನಾಗಿರುತ್ತೇನೆ. ಅವರ ಜೊತೆ ಚರ್ಚಿಸಲು ಬಹಳಷ್ಟು ವಿಚಾರ ಇತ್ತು. ನಾವು ಸಾರ್ವಜನಿಕ ಒಳಿತಿಗಾಗಿ AI ಬಗ್ಗೆ ಮಾತನಾಡಿದ್ದೇವೆ.

ಜೊತೆಗೆ ನಾವು ಭಾರತದಿಂದ ಹೇಗೆ ಜಗತ್ತಿಗೆ ಪಾಠಗಳನ್ನು ತೆಗೆದುಕೊಳ್ಳಬಹುದು ಅನ್ನೋದ್ರ ಬಗ್ಗೆಯೂ ಚರ್ಚೆಯಾಗಿದೆ. ಮಹಿಳಾ ನೇತೃತ್ವದ ಅಭಿವೃದ್ಧಿ, ಕೃಷಿ, ಆರೋಗ್ಯ ಮತ್ತು ಹವಾಮಾನ ಹೊಂದಾಣಿಕೆಯಲ್ಲಿ ಬಗ್ಗೆ ಚರ್ಚೆ ಮಾಡಿದ್ದೇವೆ ಎಂದು ಬಿಲ್ ಗೇಟ್ಸ್ ತಿಳಿಸಿದ್ದಾರೆ. ಭಾರತೀಯ ಸಂಶೋಧನೆ ಮತ್ತು ತಂತ್ರಜ್ಞಾನದ ಹತೋಟಿ ಕುರಿತು ಚರ್ಚೆ ಆಗಿದೆ. ಗೇಟ್ಸ್ ಫೌಂಡೇಶನ್ ಇಂಡಿಯಾ ಮತ್ತು ಆರೋಗ್ಯ ಸಚಿವಾಲಯ ನಡುವಿನ ಪಾಲುದಾರಿಕೆ ಮುಂದುವರಿಸುವ ನಿರೀಕ್ಷೆ ಇದೆ ಎಂದಿದ್ದಾರೆ. ಮೋದಿ ಭೇಟಿಗೂ ಮೊದಲು ಕೇಂದ್ರ ಆರೋಗ್ಯ ಸಚಿವರಾದ ಮನ್ಸುಕ್ ಮಾಂಡವಿಯಾ, ಸ್ಮೃತಿ ಇರಾನಿ, ಎಸ್ ಜೈಶಂಕರ್ ಅವರನ್ನು ಭೇಟಿಯಾಗಿದ್ದರು.

## ಬೆಳಗಾವಿಯಲ್ಲಿ ಕೊನೆಗೂ ಜೈ ಮಹಾರಾಷ್ಟ್ರ ಚೌಕ್ ಫಲಕ ತೆರವು




ಬೆಳಗಾವಿ: ಇಲ್ಲಿಯ ಅನಗೋಳದಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ(ಎಂಇ-ಎಸ್) ಕಾರ್ಯಕರ್ತರು ನಿರ್ಮಿಸಿದ್ದ ಜೈ ಮಹಾರಾಷ್ಟ್ರ ಚೌಕ್ ಎಂಬ ನಾಮಫಲಕವನ್ನು ಕೊನೆಗೂ ಪೊಲೀಸರು ತೆರವುಗೊಳಿಸಿದ್ದಾರೆ.

ನಾಮಫಲಕ ತೆರವುಗೊಳಿಸದಂತೆ ಒತ್ತಾಯಿಸಿ ಕರುನಾಡು ವಿಜಯ ಸೇನೆ ಸಂಘಟನೆ ಕಾರ್ಯಕರ್ತರು ಮಹಾನಗರ ಪಾಲಿಕೆ ಕಚೇರಿ ಆವರಣದಲ್ಲಿ ಆಯುಕ್ತರ ಕಾರಿಗೆ ಗುರುವಾರ ಮುತ್ತಿಗೆ ಹಾಕಿ ರಾತ್ರಿ ಪಾಲಿಕೆ ಎದುರು ಧರಣಿ ನಡೆಸಿದ್ದಾರೆ. ಆದರೂ ಪ್ರಯೋಜನವಾಗಿರಲಿಲ್ಲ. ಈ ನಿಟ್ಟಿನಲ್ಲಿ ಕನ್ನಡ ಹೋರಾಟಗಾರರು ಪಾಲಿಕೆ ಅಧಿಕಾರಿಗಳ ಮೇಲೆ ತೀವ್ರ ಒತ್ತಡ ಹೇರಿದರು.

ಕೊನೆಗೂ ಪಾಲಿಕೆ ಅಧಿಕಾರಿಗಳು ಮತ್ತು ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಆಗ ಸಮಿತಿಯ ಕೆಲ ಸದಸ್ಯರು ಫಲಕ ತೆರವುಗೊಳಿಸಿದಂತೆ ಎಚ್ಚರಿಕೆ ರವಾನಿಸಿದರು. ಅದಕ್ಕೆ ಕಿವಿಗೊಡದ ಪೊಲೀಸರು ಫಲಕ ತೆರವು ಮಾಡಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ಸ್ಥಳದಲ್ಲಿ ಪೊಲೀಸ್ ಭದ್ರತೆ ನಿಯೋಜಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮಾಲ್ನಲ್ಲಿ ಅಗ್ನಿ ಅವಘಡ: 44 ಜನರು ದಾರುಣ ಸಾವು

ಬಾಂಗ್ಲಾದೇಶ: ರಾಜಧಾನಿಯ ಢಾಕಾದಲ್ಲಿ ನಿನ್ನೆ ರಾತ್ರಿ ಭೀಕರ ಅಗ್ನಿ ದುರಂತ ನಡೆದಿದೆ. ಬೈಲಿ ರೋಡ್ ಪ್ರದೇಶದಲ್ಲಿರುವ ಆರು ಅಂತಸ್ತಿನ ಶಾಪಿಂಗ್ ಮಾಲ್‌ನಲ್ಲಿ ಬೆಂಕಿ ಸಂಭವಿಸಿ ಕನಿಷ್ಠ 44 ಜನ ಸಾವನ್ನಪ್ಪಿದ್ದಾರೆ.

ದುರ್ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ. ಗುರುವಾರ ರಾತ್ರಿ ಢಾಕಾದ ಡೌನ್‌ಟೌನ್ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ಆರೋಗ್ಯ ಸಚಿವ ಸಮಂತಾ ಲಾಲ್ ಸೇನ್ ಹೇಳಿದ್ದಾರೆ. ವಿಷಯ ಗೊತ್ತಾಗುತ್ತಿದ್ದಂತೆಯೇ ಅಗ್ನಿಶಾಮಕ ದಳದವರು ರಕ್ಷಣೆಗೆ ದೌಡಾಯಿಸಿದ್ದಾರೆ. 22 ಮಂದಿಯನ್ನು ಸುರಕ್ಷಿತವಾಗಿ ರಕ್ಷಣೆ ಮಾಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಢಾಕಾ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿ ಒಟ್ಟು 33 ಮಂದಿ ಸಾವನ್ನಪ್ಪಿದ್ದಾರೆ. ಇನ್ನು 10 ಮಂದಿಯನ್ನು ಶೇಖ್ ಹಸೀನಾ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಬರ್ನ್ ಮತ್ತು ಪ್ಲಾಸ್ಟಿಕ್ ಸರ್ಜ-ರಿಗೆ ಕರೆದೊಯ್ಯಲಾಗಿತ್ತು. ಈ ವೇಳೆ ಅವರು ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.

## ಪಾಕ್ ಪರ ಘೋಷಣೆ ಕೇಸು: ಫೊರೆನ್ಸಿಕ್ ವರದಿ ಬಂದ ನಂತರ ಕ್ರಮ ಎಂದ ಗೃಹ ಸಚಿವ ಡಾ ಪರಮೇಶ್ವರ್



ಬೆಂಗಳೂರು: ಕಾಂಗ್ರೆಸ್ ರಾಜ್ಯಸಭಾ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಬೆಂಬಲಿಗರು ಪಾಕಿಸ್ತಾನದ ಪರ ಘೋಷಣೆಗಳನ್ನು ಕೂಗಿದ ಆರೋಪದ ಬಗ್ಗೆ ಕ್ರಮ ಕೈಗೊಳ್ಳಲು ವಿಧಿ ವಿಜ್ಞಾನ ಪ್ರಯೋಗಾಲಯದ ವರದಿಗಾಗಿ (FSL report) ಪೊಲೀಸರು ಕಾಯುತ್ತಿದ್ದಾರೆ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಶಂಕಿತನೊಬ್ಬನನ್ನು ವಶಕ್ಕೆ ಪಡೆಯಲಾಗಿದ್ದು, ಆತನ ಧ್ವನಿಮುದ್ರಿಕೆಯನ್ನು ಪೊಲೀಸರು ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಿದ್ದಾರೆ ಎಂದರು.

ಮಂಗಳವಾರ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಡಾ ನಾಸಿರ್ ಹುಸೇನ್ ಗೆಲುವಿನ ಸಂಭ್ರಮಾಚರಣೆ ವೇಳೆ ಹುಸೇನ್ ಬೆಂಬಲಿಗರು ಪಾಕಿಸ್ತಾನ ಪರ ಘೋಷಣೆಗಳನ್ನು ಕೂಗಿದ್ದಾರೆ ಎಂದು ಪ್ರತಿಪಕ್ಷ ಬಿಜೆಪಿ ಆರೋಪಿಸುತ್ತಿದ್ದು ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಈಗಾಗಲೇ ಎಫ್ ಐಆರ್ ದಾಖಲಾಗಿದೆ.

ಘಟನೆಯ ಉದ್ದೇಶಿತ ವೀಡಿಯೊಗಳನ್ನು ಟಿವಿ ಸುದ್ದಿ ವಾಹಿನಿಗಳು ಪ್ರಸಾರ ಮಾಡಿದ್ದವು ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದವು. ಎಲ್ಲಾ ಸುದ್ದಿವಾಹಿನಿಗಳ ವಿಡಿಯೊಗಳನ್ನು ಕಳುಹಿಸಲಾಗಿದ್ದು ಅವುಗಳನ್ನು ಪರೀಕ್ಷೆ ಮಾಡಿ ವರದಿ ಬರುವಾಗ ಸ್ವಲ್ಪ ತಡವಾಗಬಹುದು ಎಂದರು.

ಎಫ್‌ಎಸ್‌ಎಲ್ ವರದಿ ಇನ್ನಷ್ಟೇ ಬರಬೇಕಿದೆ. ಆದಷ್ಟು ಬೇಗ ವರದಿ ಕೇಳಿದ್ದೇವೆ. FSL ಗೆ ನೀಡಲಾದ ವೀಡಿಯೊಗಳು ಒಂದು ಚಾನಲ್ ಅಥವಾ ಒಂದು ಕ್ಲಿಪ್‌ನಿಂದ ಅಲ್ಲ. ಹಲವಾರು ಕ್ಲಿಪ್ಪಿಂಗ್‌ಗಳನ್ನು ಭದ್ರಪಡಿಸಿ ಎಫ್‌ಎಸ್‌ಎಲ್‌ಗೆ ನೀಡಲಾಗಿದೆ. ವರದಿ ಬರಬೇಕಿದ್ದು, ವರದಿ ಬಂದರೆ ತಕ್ಷಣ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಈವರೆಗೆ ಏಳು ಮಂದಿಯನ್ನು ಕರೆಸಿ ಹೇಳಿಕೆ ಪಡೆಯಲಾಗಿದೆ. ಜೊತೆಗೆ ಅವರ ಧ್ವನಿ ಮಾದ-ರಿಗಳನ್ನು ಕ್ಲಿಪ್‌ನಲ್ಲಿ ಹೋಲಿಸಲು ದಾಖಲು ಮಾಡಿಕೊಳ್ಳಲಾಗಿದೆ. 'ಶಂಕಿತನೊಬ್ಬನನ್ನು ವಶಕ್ಕೆ ಪಡೆಯಲಾಗಿದ್ದು, ಆತನ ಧ್ವನಿ ಮಾದರಿಯನ್ನು ಪರೀಕ್ಷೆಗೆ ಕಳುಹಿಸಲಾಗಿದೆ. ಎಫ್‌ಎಸ್‌ಎಲ್ ವರದಿ ಬಂದ ನಂತರ ನಾವು ಮುಂದಿನ ತನಿಖೆಯ ಬಗ್ಗೆ ತಿಳಿಸುತ್ತೇವೆ ಎಂದರು.

'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ ಆರೋಪಿಗಳನ್ನು ಬಂಧಿಸುವಲ್ಲಿ ಅಸಡ್ಡೆ ಮತ್ತು ಅಸಹಾಯಕತೆ ತೋರಿಸುತ್ತಿರುವ ಕಾಂಗ್ರೆಸ್ ಸರ್ಕಾರ ರಾಜೀನಾಮೆ ನೀಡಬೇಕೆಂದು ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಒತ್ತಾಯಿಸಿವೆ. ಅಲ್ಲದೆ ಆಡಳಿತ ಪಕ್ಷಗಳು ಸಮಸ್ಯೆಯನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದೆ.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸರ್ಕಾರವನ್ನು ವಜಾಗೊಳಿಸಲು ಶಿಫಾರಸು ಮಾಡಬೇಕೆಂದು ಬಿಜೆಪಿ ಒತ್ತಾಯಿಸಿದೆ.

## ರಾಜ್ಯ ಸರ್ಕಾರದ ಜಾತಿಗಣತಿ ಅವೈಜ್ಞಾನಿಕ: ಜಯ ಮೃತ್ಯುಂಜಯ ಶ್ರೀ



ಯಾದಗಿರಿ: ಜಾತಿ-ಜಾತಿಗಳ ನಡುವೆ ಗೊಂದಲ ಮೂಡಿಸಿ, ಒಗ್ಗಟ್ಟನ್ನು ದುರ್ಬಲಗೊಳಿಸುವ ಹುನ್ನಾರ ರಾಜ್ಯ ಸರ್ಕಾರದ್ದಾಗಿದ್ದು, ಇದನ್ನು ಪಂಚಮಸಾಲಿಪೀಠ ಹಾಗೂ ವೈಯಕ್ತಿಕವಾಗಿ ನಾನು ಸಹ ವಿರೋಧಿಸುತ್ತೇನೆ ಎಂದು ಕೂಡಲ ಸಂಗಮ ಪಂಚಮಸಾಲಿ ಪೀಠದ ಶ್ರೀ ಬಸವ ಜಯಮೃತ್ಯುಂಜಯ ಸ್ವಾಮಿಗಳು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಾತನಾಡಿದ ಅವರು, ಅವೈಜ್ಞಾನಿಕ ಸಮೀಕ್ಷೆಯ ತಳಹದಿಯಲ್ಲಿ ವರದಿ ಸಲ್ಲಿಕೆ ಮಾಡಿರುವುದು ಸೂಕ್ತ ಅಲ್ಲ, ಈಗಿರುವ ಮುಖ್ಯಮಂತ್ರಿಗಳು ತಿಳಿದವರು, ಸಾಕಷ್ಟು ಜ್ಞಾನ ಉಳ್ಳವರಾಗಿದ್ದಾರೆ. ದಯವಿಟ್ಟು ಜಾತಿಗಣತಿ ಮೂಲಕ ಸಮಾಜದಲ್ಲಿ ಗೊಂದಲ ಸೃಷ್ಟಿ ಮಾಡಬೇಡಿ ಎಂದು ಮನವಿ ಮಾಡಿಕೊಂಡರು.

ಲಿಂಗಾಯತ ಸಮಾಜವನ್ನು ನಾಲ್ಕನೇ ಸ್ಥಾನದಲ್ಲಿರಿಸಿ, ಅವಮಾನ ಮಾಡುವ ಹುನ್ನಾರ ಯಾವ ಮಠಾಧೀಶರು ಸಹಿಸಿಕೊಳ್ಳುವುದಿಲ್ಲ, ಎಲ್ಲಾ ಜಾತಿ-ಜನಾಂಗದವರನ್ನು ಅಣ್ಣ ತಮ್ಮಂದಿರ ರೀತಿ ಕಂಡ ಸಮುದಾಯವನ್ನು ಈ ವರದಿ ಮೂಲಕ ಅವಮಾನಿಸುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

2015 ರ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯ ರೂಪದಲ್ಲಿ ರಾಜ್ಯ ಸರ್ಕಾರ ರಚಿಸಿದ ತಂಡವು ಜಾತಿ ಗಣತಿ ವರದಿ ನೀಡುವ ಮೂಲಕ ಸಮುದಾಯಗಳ ನಡುವೆ ವೈಷಮ್ಯ ಹುಟ್ಟಿಸುವ ಕೆಲಸ ಮಾಡುತ್ತಿದೆ. ಸಮೀಕ್ಷೆಯು, ಸಮೀಕ್ಷೆಯಾಗಿದ್ದರೆ ಅಷ್ಟೇ ಚಂದ, ಆದರೆ ಸಮೀಕ್ಷೆ ಜಾತಿ ಗಣತಿ ವರದಿಯಾಗಿ ಪರಿವರ್ತನೆಗೊಂಡು ಗೊಂದಲಕ್ಕೆ ಆಸ್ಪದ ಕೊಡಬಾರದು. ರಾಜ್ಯ ಸರ್ಕಾರದಲ್ಲಿರುವ ಏಳು ಮಂತ್ರಿಗಳು ಹಾಗೂ ಶಾಸಕರು ಧ್ವನಿ ಎತ್ತು ಸಮಾಜಕ್ಕಾದ ಅನ್ಯಾಯ ಸರಿಪಡಿಸಬೇಕೆಂದು ತಿಳಿಸಿದರು.

## ಬೆಳಗಾವಿ: ನಡು ರಸ್ತೆಯಲ್ಲೇ ಧಗಧಗನೆ ಹೊತ್ತಿ ಉರಿದ ಕೆಎಸ್‌ಆರ್‌ಟಿಸಿ ಬಸ್



ಬೆಳಗಾವಿ: ಬೆಂಗಳೂ-ರಿನಿಂದ ಮುಂಬೈಗೆ ತೆರಳುತ್ತಿದ್ದ ಖಾಸಗಿ ಬಸ್ ನಲ್ಲಿ ಅಗ್ನಿ ಅವಘಡ ಸಂಭವಿಸಿದ ಘಟನೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹರಗಾಪುರ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಬಸ್ ನಲ್ಲಿ 28 ಪ್ರಯಾಣಿಕರು ಇದ್ದರು. ಶುಕ್ರವಾರ ಬೆಳಗಿನ ಜಾವ ಈ ಘಟನೆ ನಡೆದಿದ್ದು, ಬಸ್ ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಬಸ್ ಚಾಲಕ ಬಸ್ ನ್ನು ರಸ್ತೆ ಬದಿ ನಿಲ್ಲಿಸಿ ಎಲ್ಲಾ ಪ್ರಯಾಣಿಕರನ್ನು ಬಸ್ ನಿಂದ ಕೆಳಗಿಳಿಸಿದ್ದಾರೆ. ಕ್ಷಣಾರ್ಧದಲ್ಲಿ ಬೆಂಕಿಯ ಕೆನ್ನಾಲಿಗೆ ಸಂಪೂರ್ಣ ಬಸ್ ಆವ-ರಿಸಿದ್ದು, ಇಡೀ ಬಸ್ ಸುಟ್ಟು ಕರಕಲಾಗಿದೆ. ಸಂಕೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಚಾಲಕನ ಸಮಯ ಪ್ರಜ್ಞೆಯಿಂದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಸ್ ನಲ್ಲಿ ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಹೊತ್ತಿಕೊಂಡಿದೆ ಎನ್ನಲಾಗಿದೆ.

## ನಟ ದರ್ಶನ್ ಗೆ ಮಹಿಳಾ ಆಯೋಗದ ಅಧ್ಯಕ್ಷೆ ವಾರ್ನಿಂಗ್



ಬೆಂಗಳೂರು: ಇತ್ತೀಚೆಗೆ ಹೆಣ್ಣುಮಕ್ಕಳ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ್ದ ಚಾಲೆಂ-ಜಿಂಗ್ ಸ್ಟಾರ್ ನಟ ದರ್ಶನ್ ಅವರಿಗೆ ರಾಜ್ಯ ಮಹಿಳಾ ಆಯೋಗ ನೋಟಿಸ್ ನೀಡಿದೆ. ನೋಟಿಸ್ ನೀಡಿದ ಬಳಿಕ ಖಾಸಗಿ ವಾಹಿನಿಯೊಂದರಲ್ಲಿ ಮಾತಾಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಪ್ರಮಿಳಾ ನಾಯ್ಡು ಅವರು, ನಮಗೆ ನಿರ್ದಿಷ್ಟ ಕಾನೂನು ಎಂದು ಇರುತ್ತೆ. ಅದರ ಪ್ರಕಾರ ನಾವು ಮೊದಲು ಸ್ಪಷ್ಟನೆ ಕೇಳ್ತೀನಿ ಎಂದರು.

ಸದ್ಯ ನಟ ದರ್ಶನ್ ಅವರಿಗೆ ನೋಟಿಸ್ ಕೊಟ್ಟಿದ್ದೇವೆ. ಉತ್ತರ ನೀಡಲು 7 ದಿನಗಳ ಕಾಲ ಅವಕಾಶ ನೀಡಲಾಗಿದೆ. ಈಗಾಗಲೇ ಎರಡು ದಿನ ಕಳೆದಿದೆ. ಇನ್ನು, ಐದು ದಿನ ಇದೆ, ಅಷ್ಟರಲ್ಲಿ ಸ್ಪಷ್ಟನೆ ನೀಡದೆ ಹೋದರೆ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು ಪ್ರಮಿಳಾ ನಾಯ್ಡು.

ಸಾರ್ವಜನಿಕ ಸಭೆಯೊಂದರಲ್ಲಿ ಇವತ್ತು ಇವಳಿರ್ತಾಳೆ, ನಾಳೆ ಅವಳಿರ್ತಾಳೆ ಎಂದು ನಟ ದರ್ಶನ್ ಮಾತಾಡಿದ್ದಾರೆ. ಈ ಬಗ್ಗೆ ಗೌಡ್ತಿಯರ ಸೇನೆಯಿಂದ ಮಹಿಳಾ ಆಯೋಗಕ್ಕೆ ದೂರು ಬಂದಿದೆ. ಈ ಬಗ್ಗೆ ನಾನು ಅಧಿಕಾರಿಗಳ ಜೊತೆ ಚರ್ಚೆ ಮಾಡಿದ್ದೇನೆ. ಮನೆಗೆ ನೋಟಿಸ್ ನೀಡಲು ಹೋದಾಗ ಯಾರು ತೆಗೆದುಕೊಂಡಿರಲಿಲ್ಲ. ಬಳಿಕ ದರ್ಶನ್ ಪಿಎ ಬಂದು ಸೈನ್ ಮಾಡಿ ತೆಗೆದುಕೊಂಡು ಹೋಗಿದ್ದಾರೆ. ಇನ್ನೈದು ದಿನಗಳಲ್ಲಿ ನೋಟಿಸ್ಗೆ ಉತ್ತರ ನೀಡಬೇಕು ಎಂದರು.

ಕಾನೂನು ಮುಂದೆ ಎಲ್ಲರೂ ತಲೆ ಬಗ್ಗಿಸಲೇಬೇಕು, ತಪ್ಪು ತಪ್ಪೇ. ಹೆಣ್ಣು ಹೆಣ್ಣೇ, ಸಾರ್ವಜನಿಕವಾಗಿ ಹೆಣ್ಣುಮಕ್ಕಳ ಬಗ್ಗೆ ಯಾರು ಕೆಟ್ಟದಾಗಿ ಮಾತಾಡಬಾರದು.

ಕಾನೂನು ತುಂಬಾ ಕಠಿಣವಾಗಿದೆ. ಒಂದು ಹೆಣ್ಣನ್ನು ಗುರಾಯಿಸೋದೆ ತಪ್ಪು, ಅಂಥ-'ದ್ರಲ್ಲಿ ಅವಳು ಇವಳು ಎಂದು ಮಾತಾಡೋದು ಸರಿಯಲ್ಲ ಎಂದರು.

## ಕುಶಾಲನಗರದಲ್ಲಿ ರೂ.7.5 ಕೋಟಿ ವೆಚ್ಚದಲ್ಲಿ ಆಧುನಿಕ ಕೆಎಸ್‌ಆರ್‌ಟಿಸಿ ಬಸ್ ಡಿಪೋ ನಿರ್ಮಾಣ



ಮಡಿಕೇರಿ: ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಕುಶಾಲನಗರದ ನೂತನ ಕೆಎಸ್‌ಆರ್ಟಿಸಿ ಬಸ್ ಘಟಕದ ನಿರ್ಮಾಣ ಕಾರ್ಯ ಆರಂಭವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ ಕುಶಾಲನಗರ-ಮಡಿಕೇರಿ ರಸ್ತೆಯ ಬಸವನಹಳ್ಳಿ ಬಳಿ ನಿರ್ಮಿಸುತ್ತಿರುವ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ್ದು, 7.5 ಕೋಟಿ ರೂ.ವೆಚ್ಚದಲ್ಲಿ ಸುಸಜ್ಜಿತ ಡಿಪೋ ನಿರ್ಮಾಣ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಬಸವನಹಳ್ಳಿ ಬಳಿಯ 4 ಎಕರೆ ಭೂ ಸ್ವಾಧೀನ ಪ್ರಕ್ರಿಯೆ ಮುಂದುವರೆದಿದ್ದು, ಕುಶಾಲನಗರದಿಂದ ಮೈಸೂರಿಗೆ ಸಂಪರ್ಕಿಸುವ ನಾಲ್ಕು ಪಥದ ಹೆದ್ದಾರಿಗೆ ನೇರವಾಗಿ ಡಿಪೋ ಸಂಪರ್ಕ ಕಲ್ಪಿಸಲು ಯೋಜಿಸಲಾಗುತ್ತಿದೆ ಎಂದು ಮೂಲಗಳು ಖಚಿತಪಡಿಸಿವೆ. ಅರಣ್ಯ ಇಲಾಖೆಯಿಂದ ಅನುಮತಿ ಪಡೆದು ನಾಲ್ಕು ಎಕರೆ ಜಮೀನಿನಲ್ಲಿದ್ದ ಮರಗಳನ್ನು ತೆರವುಗೊಳಿಸಲಾಗಿದೆ. ಈ ಡಿಪೋ ರಾಷ್ಟ್ರೀಯ ಹೆದ್ದಾರಿ 275 ರಿಂದ ಸುಮಾರು ಐದು ಕಿಲೋಮೀಟರ್ ದೂರದಲ್ಲಿದೆ.

ಸುತ್ತಲಿನ ಆವರಣಗೋಡೆ ನಿರ್ಮಾಣ-ಕ್ಕೆ ಬೇಕಾಗುವ ಸಾಮಗ್ರಿಗಳು ಹಾಗೂ ಕಟ್ಟಡದ ತಳಪಾಯಕ್ಕೆ ಬೇಕಾದ ಕಬ್ಬಿಣದ ಸರಳುಗಳು ಹಾಗೂ ಇತರೆ ಸಾಮಗ್ರಿಗಳು ಈಗಾಗಲೇ ಬಂದಿದ್ದು, ಇಡೀ ಪ್ರದೇಶವನ್ನು ಸಮತಟ್ಟುಗೊಳಿಸಲಾಗುತ್ತಿದೆ. ತ್ವ-ರಿತಗತಿಯಲ್ಲಿ ಕಾಮಗಾರಿ ಮುಂದುವರೆಯಲಿದೆ. ಮೈಸೂರು ಮೂಲದ ಗುತ್ತಿಗೆದಾರರೊಬ್ಬರು ಟೆಂಡರ್ ಪಡೆದಿದ್ದಾರೆ ಎಂದು ಕೆಎಸ್‌ಆರ್ಟಿಸಿ ಪುತ್ತೂರು ವಿಭಾಗೀಯ ನಿಯಂತ್ರಣಾಧಿಕಾರಿ ಬಿ.ಜಯಕರ ಶೆಟ್ಟಿ ಖಚಿತಪಡಿಸಿದರು.

ವಿದ್ಯುತ್ ಚಾಲಿತ ಬಸ್‌ಗಳಿಗೆ ಇ-ಚಾರ್ಜಿಂಗ್ ಪಾಯಿಂಟ್‌ಗಳು ಸೇರಿದಂತೆ ಆಧುನಿಕ ಸೌಲಭ್ಯಗಳೊಂದಿಗೆ ಡಿಪೋ ಸುಸಜ್ಜಿತವಾಗಿದೆ ಎಂದು ಅವರು ವಿವರಿಸಿದರು. ಮುಂಬರುವ ನಾಲ್ಕು ಪಥ-'ದ ಮೈಸೂರು-ಕುಶಾಲನಗರ ರಾಷ್ಟ್ರೀಯ ಹೆದ್ದಾರಿಗೆ ಡಿಪೋ ಉತ್ತಮ ಸಂಪರ್ಕವನ್ನು ಹೊಂದಿದೆ ಎಂದು ಮೂಲಗಳು ಖಚಿತಪಡಿಸಿವೆ.

## ದೆಹಲಿ ಚಲೋ ಪ್ರತಿಭಟನೆ: 21 ವರ್ಷದ ರೈತ ಸಾವು

### ರೈತನ ಪ್ರಕರಣಕ್ಕೆ ರೋಚಕ ತಿರುವು



ದೆಹಲಿ: ಚಲೋ ಮೆರವಣಿಗೆಯಲ್ಲಿ ಹರಿಯಾಣದ ಖಾನೌರಿ ಗಡಿಯಲ್ಲಿ ನಡೆದ ಘರ್ಷಣೆ ವೇಳೆ ಯುವ ರೈತ ಶುಭಕರನ್ ಸಿಂಗ್ ಸಾವನ್ನಪ್ಪಿದ್ದರು. ಪೊಲೀಸರು ಮತ್ತು ಅನ್ನದಾತರ ನಡುವೆ ನಡೆದ ಹಿಂಸಾಚಾರದಲ್ಲಿ ಶುಭಕರನ್ ಸಾವನ್ನಪ್ಪಿದ್ದರು.

ಇದೀಗ ಶುಭಕರನ್ ಸಿಂಗ್ ಮರಣೋತ್ತರ ಪರೀಕ್ಷೆಯ ವರದಿ ಬಹಿರಂಗವಾಗಿದ್ದು, ಪ್ರಕರಣಕ್ಕೆ ಹೊಸ ಟ್ವಿಸ್ ಸಿಕ್ಕಿದೆ. ಆಘಾತಕಾರಿ ಸಂಗತಿ ಬೆಳಕಿಗೆ ಬಂದಿದೆ.

ಗುಂಡೇಟಿನಿಂದ ಯುವ ರೈತ ಸಾವನ್ನಪ್ಪಿರೋದು ದೃಢಪಟ್ಟಿದೆ. ಪೊಲೀಸರು ಹಾರಿಸಿದ ಗುಂಡೇಟಿಗೆ ಸಾವನ್ನಪ್ಪಿದ್ರಾ? ಅಥ-'ವಾ ಬೇರೆ ಯಾರೋ ಹಾರಿಸಿ ಗುಂಡೇಟಿಗೆ ಸಾವನ್ನಪ್ಪಿದ್ರಾ ಅನ್ನೋದು ಇನ್ನಷ್ಟೇ ತಿಳಿದುಬರಬೇಕಿದೆ.

ಮರಣೋತ್ತರ ಪರೀಕ್ಷೆಗೂ ಮುನ್ನ ಶುಭಕರನ್ ಸಿಂಗ್ ದೇಹವನ್ನು ಸಿಟಿ ಸ್ಕ್ಯಾನ್ ಮಾಡಲಾಗಿದೆ. ಈ ವೇಳೆ ತಲೆಯಲ್ಲಿ ಲೋಹದ ಗುಂಡು ಪತ್ತೆಯಾಗಿದೆ. ಇದೀಗ ಮರಣೋತ್ತರ ಪರೀಕ್ಷೆ ವೇಳೆಯೂ ಪೊಲೀಸರು ಹಾರಿಸಿದ ಗುಂಡು ತಲೆಗೆ ಹೊಕ್ಕಿರೋದು ದೃಢವಾಗಿದೆ.

ಶುಭಕರನ್ ಮೃತಪಡ್ತಿದ್ದಂತೆಯೇ ಪೊಲೀಸರು ಅಪರಚಿತ ವ್ಯಕ್ತಿ ಕೊಲೆ ಮಾಡಿದ್ದಾನೆ ಎಂದು ಮರ್ಡರ್ ಕೇಸ್ ದಾಖಲಿಸಿದ್ದರು.

## ಅಂಗಾಂಗ ದಾನದಲ್ಲಿ ಕರ್ನಾಟಕಕ್ಕೆ ದೇಶದಲ್ಲಿಯೇ 2ನೇ ಸ್ಥಾನ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಅಂಗಾಂಗ ದಾನದಲ್ಲಿ ಕರ್ನಾಟಕ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ. ದಾನಿಗಳ ಕುಟುಂಬಕ್ಕೆ ಯಾವುದೇ ತೊಂದರೆಯಾಗದಂತೆ ಸರ್ಕಾರ ನೋಡಿಕೊಳ್ಳಲಿದೆ. ಅಂಗಾಂಗ ದಾನಿಗಳ ಪರ ಸರ್ಕಾರ ನಿಲ್ಲಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಮುಖ್ಯಮಂತ್ರಿ ಅಧಿಕೃತ ನಿವಾಸ ಕಾವೇರಿಯಲ್ಲಿ ಅಂಗಾಂಗ ದಾನಿಗಳ ಕುಟುಂಬದವರಿಗೆ ಪ್ರಶಂಸನಾ ಪತ್ರ ವಿತರಿಸಿ ಮಾತನಾಡಿದ ಮುಖ್ಯಮಂತ್ರಿ, ಒಬ್ಬರ ಜೀವ ಹೋದ ಸಂದರ್ಭದಲ್ಲಿ ಮತ್ತೊರ್ವರ ಜೀವ ಉಳಿಸುವ ಸಂಗತಿಯಲ್ಲ. ಅಂಗಾಂಗ ದಾನ ಬಗ್ಗೆ ಯೋಚಿಸುವುದು ಸಾಮಾನ್ಯ ಹೆಚ್ಚಾಗಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಒತ್ತು ನೀಡಿದ್ದಾರೆ ಎಂದು ತಿಳಿಸಿದರು.

ನೀವು ಕೈಗೊಂಡ ನಿರ್ಧಾರ ಸುಲಭವಲ್ಲ. ಆದರೆ, ಇತರರ ಜೀವ ಉಳಿಸುವ ಕೆಲಸ ಮಾಡಿದ್ದೀರಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಸಿದ್ದರಾಮಯ್ಯ, ಸಂಕಷ್ಟದ ಸಂದರ್ಭದಲ್ಲಿ ಸರ್ಕಾರ ನಿಮ್ಮ ಜೊತೆಗೆ ಇರಲಿದೆ ಎಂದು ಧೈರ್ಯ ತುಂಬಿದರು. ತಮ್ಮ ಹಿಂದಿನ ಅವಧಿಯಲ್ಲಿ ಅಂಗಾಂಗ ದಾನಕ್ಕೆ ಸೊಸೈಟಿ ಸ್ಥಾಪಿಸಿದ್ದನ್ನು ಸ್ಮರಿಸಿದ ಸಿಎಂ, ಇನ್ನಷ್ಟು ಜನರು ಅಂಗಾಂಗ ದಾನಕ್ಕೆ ಮುಂದಾಗಬೇಕೆಂದು ಕರೆ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಅಂಗಾಂಗ ದಾನ ಕೋರಿ ನೋಂದಾಯಿಸಿಕೊಂಡವರ ಸಂಖ್ಯೆ 8,000ಕ್ಕೂ ಹೆಚ್ಚಿದ್ದು, ಕಳೆದೊಂದು ವರ್ಷದಲ್ಲಿ ಕೇವಲ 178 ಅಂಗಾಂಗ ದಾನ ನಡೆದಿದೆ. ಜನರಲ್ಲಿ ಅಂಗಾಂಗ ದಾನ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಅಂಗಾಂಗ ದಾನಿಗಳ ಕುಟುಂಬಸ್ಥರಿಗೆ ಪ್ರಶಂಸನಾ ಪತ್ರ ನೀಡುವ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

# ನರೇಂದ್ರ ಮೊದಿಯವರನ್ನ ಮತ್ತೊಮ್ಮೆ ಪ್ರಧಾನಿ ಮಾಡಲು ಕಾರ್ಯಕರ್ತರು ಅವಿರತ ಶ್ರಮವಹಿಸಬೇಕು: ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಅಶ್ವಥನಾರಾಯಣ

ಬೆಳಗಾವಿ: ಜಾತಿ ಮತ ಪಂಥಗಳನ್ನು ಮೀರಿ ರಾಷ್ಟ್ರೀಯತೆ, ರಾಷ್ಟ್ರದ ಸಮಗ್ರತೆ, ಅಭಿವೃದ್ಧಿ ಪರವಾದ ಕಾರ್ಯಗಳನ್ನು ಮಾಡುತ್ತ ಭಾರತಕ್ಕೆ ಜಗದ್ಗುರು ಸ್ಥಾನ ತಂದುಕೊಡಲು ಹಗಲಿರುಳು ಶ್ರಮಿಸುತ್ತಿರುವ ನೆಚ್ಚಿನ ಪ್ರದಾನಿ ನರೇಂದ್ರ ಮೊದಿಯವರನ್ನ ಮತ್ತೊಮ್ಮೆ ಪ್ರಧಾನಿ ಮಾಡಲು ಕಾರ್ಯಕರ್ತರು ಅವಿರತ ಶ್ರಮವಹಿಸಬೇಕೆಂದು ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಅಶ್ವಥನಾರಾಯಣ ಹೇಳಿದರು.

ಸಮೀಪದ ಮುತಗಾ ಗ್ರಾಮದಲ್ಲಿ ಜಿಲ್ಲಾ ಹಿಂದುಳಿದ ಮೊರ್ಚಾ ಅಧ್ಯಕ್ಷ ಉಮೇಶ ಪೂರಿಯವರ ಮನೆಯಲ್ಲಿ ಆಯೊಜಿಸಿದ್ದ ಉಪಹಾರ ಕಾರ್ಯಕ್ರಮದಲ್ಲಿ ಮಾತನಾಡಿ, ಭಾರತ



ದೇಶ ಕಳೆದ 10 ವರ್ಷದಲ್ಲಿ ಪ್ರಪಂಚವೆ ಬೆರಗಾಗುವ ಮಟ್ಟಕ್ಕೆ ಅಭಿವೃದ್ಧಿಯನ್ನು ಸಾಧಿಸಿದೆ. ಮನೆ ಮನೆಗೆ ಕುಡಿಯುವ ನೀರು, ತ್ರಿ ತಲಾಕ ರದ್ದತಿ, ಜಮ್ಮು ಕಾಶ್ಮೀರ ಆರ್ಟಿಕಲ್ 370 ರದ್ದುಗೊಳಿಸಿ ಶತಮಾನಗಳ ಹೋರಾಟ ರಾಮ ಮಂದಿರ ನಿರ್ಮಾಣ, ಉಜ್ವಲಾ ಗ್ಯಾಸ ಸಂಪರ್ಕ, ಸ್ಟಾರ್ಟಪ್ ಇಂಡಿಯಾ, ಮೆಕ್ ಇನ್ ಇಂಡಿಯಾ, ವಿಶ್ವಕರ್ಮ ಯೋಜನೆ, ಸ್ವನಿಧಿ ಹೀಗೆ ನೂರಾರು ಯೋಜನೆ ನೀಡಿ ಭಾರತವನ್ನು ಸ್ವಾವಲಂಬನೆ ಮಾಡುವದರೊಂದಿಗೆ ರಫ್ತು ಮಾಡುವ ದೇಶವಾಗಿ ಹೊರಹೊಮ್ಮಿದೆ ರಕ್ಷಣಾ ಹಾಗೂ ಅರ್ಥಿಕ ಕ್ಷೇತ್ರಗಳಲ್ಲಿ ಬಲಿಷ್ಠ ರಾಷ್ಟ್ರವನ್ನು ಮೀರಿಸುತ್ತಿದೆ. ಶತೃರಾಷ್ಟಗಳ ಬಯೊತ್ಪಾದನಾ ಕೃತ್ಯಗಳಿಗೆ ಆ ದೇಶದ ಒಳಗೆ ನುಗ್ಗಿ ಶತೃಗಳನ್ನು ಧ್ವಂಸ ಮಾಡಿದ ಕಿರ್ತಿ ಬಿಜೆಪಿ ಸರಕಾರಕ್ಕೆ ಸಲ್ಲುತ್ತದೆ ಎಂದರು.

ಜಿಲ್ಲಾ ವೈದ್ಯಕೀಯ ಪ್ರಕೊಷ್ಟಾದ ಸಂಚಾಲಕ ಡಾ.ಗುರು ಕೋತಿನ ಮಾತನಾಡಿ, ಬೆಳಗಾವಿ ಮತ್ತು ಚಿಕ್ಕೋಡಿಯ ಲೊಕಸಭಾ ಕ್ಷೇತ್ರದಲ್ಲಿ ಬಿಜೆಪಿ ವಿಜಯ ಖಚಿತ ಆದರೆ ಪಕ್ಷದಲ್ಲಿ ಇರಲಾರದ ಜನಸಾಮನ್ಯ-ರಿಗೆ ಬೆಟ್ಟಿಯಾಗದ ನಾಯಕರಿಗೆ ಟಿಕೆಟ್ ಕೊಡದೆ ಸಾಮನ್ಯರ ಜೋತೆಗೂಡಿ ಕೆಲಸ ಮಾಡುವದರೊಂದಿಗೆ ಪಕ್ಷ ಬೆಳೆಸುವವರಿಗೆ ಟಿಕೆಟ್ ನೀಡಬೇಕೆಂದು ವಿನಂತಿಸಿದರು.

ರಾಜ್ಯ ಮಾಧ್ಯಮ ಸಮಿತ ಸದಸ್ಯ ಎಫ್.ಎಸ್.ಸಿದ್ದನಗೌಡರ, ರಾಜ್ಯ ಸಾಮಾಜಿಕ ಜಾಲತಾಣದ ನೀತಿನ ಚೌಗಲೆ, ಜಿಲ್ಲಾ ಉಪಾಧ್ಯಕ್ಷ ಯುವರಾಜ ಜಾಧವ, ಖಜಾಂಚಿ ಮಲ್ಲಿಕಾರ್ಜುನ ಮಾದಮ್ಮನವರ, ದೀಶಾ ಸಮಿತಿ ಸದಸ್ಯ ರಾಜು ದೇಸಾಯಿ, ಸಂತೋಷ ದೇಶನೂರ, ವೀರಭದ್ರ ಪೂಜಾರಿ ಹಾಗೂ ನುರಾರು ಕಾರ್ಯಕರ್ತರು ಇದ್ದರು.

ಇದೆ ಸಂದರ್ಭದಲ್ಲಿ ಉಮೇಶ ಪೂರಿ, ದೀಪಕ ಪೂರಿ ಕುಟುಂಬ ಹಾಗೂ ಜಿಲ್ಲಾ ಓಬಿಸಿ ಮೋರ್ಚಾ ಪದಾಧಿಕಾರಿಗಳು ರಾಜ್ಯ ಮುಖ್ಯವಕ್ತಾರರನ್ನು ಸತ್ಕರಿಸಿದರು.

## ವಿಧ್ಯುತ ಪ್ರಸರಣ: ಸಾರ್ವಜನಿಕರಿಗೆ ಎಚ್ಚರ

ಬೆಳಗಾವಿ: ಬೆಳಗಾವಿ, ಧಾರವಾಡ ಹಾಗೂ ಬಾಗಲಕೋಟ ಜಿಲ್ಲೆಯ ಸವದತ್ತಿ, ಹುಬ್ಬಳ್ಳಿ ಹಾಗೂ ಮುಧೋಳ ತಾಲೂಕಿನಲ್ಲಿ ಹಾದು ಹೋಗಿರುವ ಹಾಲಿ ಇರುವ 220ಕೆವಿ ಬಿದ್ನಾಳ - ಸವದತ್ತಿ- ಮಹಾಲಿಂಗಪೂರ ಒಂಟಿ ವಿದ್ಯುತ್ ಪ್ರಸರಣ ಮಾರ್ಗದ ಬದಲಾಗಿ 44.92 ಕಿಮೀ ಉದ್ದದ ದ್ವಿ ಪ್ರಸರಣ ವಿದ್ಯುತ್ ಮಾರ್ಗವನ್ನು ನಿರ್ಮಿಸಲಾಗಿದೆ. ಸದರಿ 220 ಕೆವಿ ವಿದ್ಯುತ್ ಪ್ರಸರಣ ಮಾರ್ಗವು ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ಬಿದ್ನಾಳ, ಕೇಶ್ವಾಪೂರ, ಬೆಂಗೇರಿ, ಗೋಪನಕೊಪ್ಪ ಹಾಗೂ ಧಾರವಾಡ ತಾಲ್ಲೂಕಿನ ಸುಳ್ಳ. ಹೆಬ್ಬಾಳ, ತಲವಾರಿ, ತಾಳಿಮೊರಬ, ಮೊರಬ, ಶಿರೂರ ಮತ್ತು ಗುಮ್ಮನಗೋಳ ಹಾಗೂ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಬೆಟಸೂರ ಗ್ರಾಮದ ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ಸದರಿ ವಿದ್ಯುತ್ ಪ್ರಸರಣ ಮಾರ್ಗವನ್ನು ಮಾ. 07 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿಧ್ಯುತ್‌ನ್ನು ಹರಿಬಿಡಲಾಗುತ್ತಿದ್ದು, ಸಾರ್ವಜನಿಕರು ಮಾರ್ಗದಲ್ಲಿ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ, ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ, ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಮಾಡಬಾರದೆಂದು ಈ ಮೂಲಕ ತಿಳಿಸಲಾಗಿದೆ.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಕಾರ್ಯನಿರ್ವಾಹಕ ಅಭಿಯಂತರು (ವಿ), ಬೃಹತ್ ಕಾಮಗಾರಿ ವಿಭಾಗ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಮಹಿಳೆ ವಿವಸ್ತ್ರಗೊಳಿಸಿ ಮೆರವಣಿಗೆ, ಪುತ್ರಿಯಿಂದ ದೂರು ದಾಖಲು




ಬೆಳಗಾವಿ: ಸುಮಾರು ಏಳು ತಿಂಗಳ ಹಿಂದೆ ಇಲ್ಲಿ ಮಹಿಳೆಯೊಬ್ಬರನ್ನು ವಿವಸ್ತ್ರಗೊಳಿಸಿ ಮೆರವಣಿಗೆ ಮಾಡಿದ ವಿಡಿಯೋ ಇತ್ತೀಚೆಗೆ ವೈರಲ್ ಆಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತೆಯ ಪುತ್ರಿ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣವನ್ನು ತನಿಖೆಗೆ ಕೈಗೆತ್ತಿಕೊಂಡಿರುವುದಾಗಿ ಗುರುವಾರ ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, 2023ರ ಜುಲೈ 31 ರಂದು ಸರ್ಕಾರವು ತನಗೆ ಮಂಜೂರು ಮಾಡಿದ ಮೂರು ಎಕರೆ ಭೂಮಿಯಲ್ಲಿ ಅರ್ಧ ಎಕರೆ ಭೂಮಿ ಒತ್ತುವರಿಯನ್ನು ಪ್ರಶ್ನಿಸಿದ್ದಕ್ಕಾಗಿ ಸಂತ್ರಸ್ತೆ ಮತ್ತು ಅವಳ ಮಗನನ್ನು ಥಳಿಸಿದ ಘಟನೆ ನಡೆದಿದೆ.

ಆರೋಪಿಯು ಮಹಿಳೆಯ ನಗ್ನ ಮೆರವಣಿಗೆ ನಡೆಸಿ, ಆಕೆಯ ಮನೆಯವರನ್ನು ಥಳಿಸಿದ್ದಲ್ಲದೆ, ದೂರು ನೀಡಿದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಿದ್ದಾಗಿ ದೂರುದಾರರು ಆರೋಪಿಸಿದ್ದಾರೆ.

ಗುರುವಾರ ಸಂತ್ರಸ್ತೆ ಮಗಳು ದೂರು ನೀಡಿದಾಗ ವಿಷಯ ಬೆಳಕಿಗೆ ಬಂದಿದೆ.

ಬೆಳಗಾವಿ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳು ಗ್ರಾಮದಲ್ಲಿ ಮೊಕ್ಕಾಂ ಹೂಡಿದ್ದು, ತನಿಖೆ ನಡೆಸುತ್ತಿದ್ದಾರೆ.

## ಆರ್ ಎಲ್ ಕಾನೂನು ಕಾಲೇಜಿನ ಮೂವರು ಹಳೆಯ ವಿದ್ಯಾರ್ಥಿಗಳು ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆ



ಐಶ್ವರ್ಯ ಗುಡದಿನ್ನಿ



ಮೇಘಾ ಸೋಮಣ್ಣನವರ್



ವಿಕಾಸ್ ದಳವಾಯಿ

ಬೆಳಗಾವಿ: ನಗರದ ಪ್ರತಿಷ್ಠಿತ ಕೆ.ಎಲ್.ಎಸ್ ಸೊಸೈಟಿಯ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಗಳಾದ ಐಶ್ವರ್ಯ ಗುಡದಿನ್ನಿ , ಮೇಘಾ ಸೋಮಣ್ಣನವರ್, ಮತ್ತು ವಿಕಾಸ್ ದಳವಾಯಿ ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾಗಿದ್ದಾರೆ ಎಂದು ಕರ್ನಾಟಕ ಹೈಕೋರ್ಟ್ ಇತ್ತೀಚಿಗೆ ಪ್ರಕಟಿಸಿರುವ ಅಧಿಸೂಚನೆಯಲ್ಲಿ ತಿಳಿಸಿದೆ.

ಕರ್ನಾಟಕ ನ್ಯಾಯಾಂಗ ಸೇವೆಗಳ (ನೇಮಕಾತಿ) ನಿಯಮಗಳು 2004 ಮತ್ತು ತಿದ್ದುಪಡಿ ನಿಯಮಗಳು 2011, 2015 ಮತ್ತು 2016ರ ಅನ್ವಯ 2023ರ ಮಾರ್ಚ್ 9ರಂದು ಸಿವಿಲ್ ನ್ಯಾಯಾಧೀಶರನ್ನು ನೇರ ನೇಮಕಾತಿಯ ಮೂಲಕ ನೇಮಕ ಮಾಡಿಕೊಳ್ಳುವ ಸಂಬಂಧ ಅಧಿಸೂಚನೆ ಹೊರಡಿಸಲಾಗಿತ್ತು. 2023ರ ನವೆಂಬರ್‌ನಲ್ಲಿ ನಡೆದಿದ್ದ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ 30.01.2024 ರಿಂದ 01.02.2024ರ ವರೆಗೆ ನಡೆದ ವೈವಾದಲ್ಲಿ ಪಡೆದ ಅಂಕಗಳನ್ನು ಆಧರಿಸಿ ಮೆ-ರಿಟ್ ಮೇಲೆ 33 ಮಂದಿ ಅಭ್ಯರ್ಥಿಗಳು ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾಗಿದ್ದಾರೆ ಎಂದು ಸಿವಿಲ್ ನ್ಯಾಯಾಧೀಶರ ನೇಮಕಾತಿ ಸಮಿತಿಯ ಕಾರ್ಯದರ್ಶಿಯೂ ಆದ ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಕೆ ಎಸ್ ಭರತ್ ಕುಮಾರ್ ಅವರು ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

ಹಳೆಯ ವಿದ್ಯಾರ್ಥಿಗಳ ಈ ಸಾಧನೆಗೆ ಕೆ.ಎಲ್.ಸೊಸೈಟಿ ಅಧ್ಯಕ್ಷ ಅನಂತ ಮಂಡಗಿ , ಕಾಲೇಜಿನ ಆಡಳಿತ ಮಂಡಳಿ ಚೇರ್ಮನ್ ಎಂ.ಆರ್. ಕುಲಕರ್ಣಿ, ಸರ್ವ ಆಡಳಿತ ಸದಸ್ಯರು, ಕಾಲೇಜಿನ ಪ್ರಾಚಾರ್ಯ ಡಾ.ಎ.ಎಚ್.ಹವಾಲ್ದಾರ್, ಹಳೆ ವಿದ್ಯಾರ್ಥಿ ಸಂಘದ ಸಂಯೋಜ-ಕ ಡಾ. ಡಿ. ಪ್ರಸನ್ನಕುಮಾರ್, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದರು.

## ಐಸಿಎಆರ್‌ನಿಂದ ಮೂರು ದಿನಗಳ ಕೃಷಿ-ಡ್ರೋನ್ ತಂತ್ರಜ್ಞಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮ

ಬಳ್ಳಾರಿ: ಬಳ್ಳಾರಿಯ ಐಸಿಎ-ಆರ್-ಭಾರತೀಯ ಮಣ್ಣು ಮತ್ತು ನೀರು ಸಂರಕ್ಷಣೆ ಸಂಶೋಧನಾ ಕೇಂದ್ರ ವತಿಯಿಂದ ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಸೋಮಲಾಪುರ ಗ್ರಾಮ, ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲೂಕಿನ ರಾಮಸಾಗರ ಗ್ರಾಮ ಮತ್ತು ಬಳ್ಳಾರಿ ತಾಲ್ಲೂಕಿನ ಬೆಳಗಲ್ ತಾಂಡಾ ಗ್ರಾಮದಲ್ಲಿ (ಫೆ.26 ರಿಂದ 28 ರವರೆಗೆ) ಮೂರು ದಿನಗಳ ಕೃಷಿ-ಡ್ರೋನ್ ತಂತ್ರಜ್ಞಾನ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಮೊದಲಿಗೆ ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಸೋಮಲಾಪುರ ಗ್ರಾಮದ 20 ಎಕರೆ ಪ್ರದೇಶದಲ್ಲಿ ಬೆಳೆದಿರುವ ತೆಂಗು ಮತ್ತು ಮಾವು ಬೆಳೆಗಳಿಗೆ ಡ್ರೋನ್ ಪ್ರಾತ್ಯಕ್ಷಿಕ ಸಿಂಪಡಣೆಯನ್ನು ಮಾಡಲಾಯಿತು. ಮಹೋಗಾನಿ, ರೆಡ್-ಸ್ಯಾಂಡರ್ಸ್ ಮತ್ತು ಕ್ಯಾಸುರಿನಾ ಮರಗಳನ್ನು ಸಹ ಆ ಪ್ರದೇಶದಲ್ಲಿ ಬೆಳೆಯಲಾಗಿದೆ. ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲೂಕಿನ ಕರಡಿಹಳ್ಳಿಯಲ್ಲಿ 5 ಎಕರೆ ಶೇಂಗಾ ಬೆಳೆಗೆ ಸಿಂಪಡಣೆಯನ್ನು




ಮಾಡಲಾಯಿತು.

ಬಳಿಕ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲೂಕಿನ ರಾಮಸಾಗರ ಗ್ರಾಮದಲ್ಲಿ 22 ಎಕರೆ ಶೇಂಗಾ ಬೆಳೆಗೆ ಹಾಗೂ 3 ಎಕರೆ ಮೆಕ್ಕೆಜೋಳದ ಬೆಳೆಗೆ ಪ್ರಾತ್ಯಕ್ಷಿಕ ಸಿಂಪಡಣೆಯನ್ನು ಮಾಡಲಾಯಿತು. ನಂತರದಲ್ಲಿ ಬಳ್ಳಾರಿ ತಾಲ್ಲೂಕಿನ ಬೆಳಗಲ್ ತಾಂಡಾ ಗ್ರಾಮದಲ್ಲಿ 6 ಎಕರೆ ಶೇಂಗಾ ಬೆಳೆಗೆ ಮತ್ತು 4 ಎಕರೆ ಕರಿಬೇವಿನ ಬೆಳೆಗೆ ಪ್ರಾತ್ಯಕ್ಷಿಕ ಸಿಂಪಡಣೆಯನ್ನು ಮಾಡಲಾಯಿತು.

ಕಾರ್ಯಕ್ರಮದಲ್ಲಿ ಬಳ್ಳಾ-ರಿಯ ಐಸಿಎಆರ್-ಭಾರತೀಯ ಮಣ್ಣು ಮತ್ತು ನೀರು ಸಂರಕ್ಷಣೆ, ಸಂಶೋಧನಾ ಕೇಂದ್ರದ ಮುಖ್ಯಸ್ಥರಾದ ಡಾ.ಬಿ.ಕೃಷ್ಣ ರಾವ್ ಮಾತನಾಡಿ, ಕೃಷಿ-ಡ್ರೋನ್ ಸಿಂಪಡಣೆಯು ಬೆಳೆಗಳಿಗೆ ರಾಸಾಯನಿಕಗಳನ್ನು ಸಿಂಪಡಿಸಲು ಬೇಕಾಗುವ ಕಾರ್ಮಿಕರನ್ನು ಕಡಿಮೆ ಮಾಡುತ್ತದೆ. ಕೇಂದ್ರೀಕೃತ ರಾಸಾಯನಿಕವನ್ನು ನಿಖರವಾಗಿ ಸಿಂಪಡಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಕಾರ್ಯ ಕ್ರಮದಲ್ಲಿ ಭಾಗವಹಿಸಿದ್ದ ರೈತರು ಹೆಚ್ಚಿನ ಪ್ರದೇಶದಲ್ಲಿ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಹಮ್ಮಿ ಕೊಳ್ಳಬೇಕೆಂದು ಒತ್ತಾಯಿಸಿದರು.

ಈ ಹಳ್ಳಿಗಳಲ್ಲಿ, ಡ್ರೋನ್ ಬಾಡಿಗೆಗೆ ಪಡೆದು, ಶೇಂಗಾ ಬೆಳೆಗೆ ಸೂಕ್ಷ್ಮ ಪೋಷಕಾಂಶಗಳನ್ನು ಹೆಚ್ಚಿನ ಪ್ರದೇಶಗಳಲ್ಲಿ ಸಿಂಪಡಿಸಲು ಪ್ರೇರೇಪಿತ ರಾಗಿದ್ದಾರೆ. ಭಾಗವಹಿಸಿದ ಅನೇಕ ರೈತರು ಡ್ರೋನ್ನ ಬೆಲೆಯನ್ನು ಕೇಳಿದರು ಮತ್ತು ಅವರಲ್ಲಿ ಕೆಲವರು ಮುಂಬರುವ ವರ್ಷಗಳಲ್ಲಿ ಡ್ರೋನ್ ಖರೀದಿಸಲು ತಮ್ಮ ಇಚ್ಛೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ಅವರು ತಿಳಿಸಿದರು.

ಕಾರ್ಯ ಕ್ರಮದಲ್ಲಿ ಸೋಮಲಾಪುರ, ಕರಡಿಹಳ್ಳಿ, ರಾಮಸಾಗರ, ರಾಂಪುರ, ಬೆಳಗಲ್ ತಾಂಡಾ, ಚೆಳ್ಳಗುರ್ಕಿ, ಜಾಗನೂರು ಗ್ರಾಮಗಳ ಸುಮಾರು ಎಪ್ಪತ್ನಾಲ್ಕು ರೈತರು ಭಾಗವಹಿಸಿದ್ದರು.

# ಮೂಡಲಗಿಯ ಶಬ್ಬಿರ್ ಜನಪದ ಗಾಯನಕ್ಕೆ ಬೆಳಗಾವಿ ಜನತೆ ಫಿದಾ

ಬೆಳಗಾವಿ: 'ಕರಿಮಣಿ ಮಾಲೀಕ ಉಪೇಂದ್ರ ರಚಿಸಿದ ಹಾಡು ದಿನಕ್ಕೆ ಸೋಷಿಯಲ್ ಮೀಡಿಯಾದಲ್ಲಿ ಸಾಕಷ್ಟು ಟ್ರೆಂಡಿಂಗ್ ನಲ್ಲಿದೆ. ಇಂದು ಎಲ್ಲಿ ನೋಡಿದಲ್ಲಿ ಯೂ ಟ್ಯೂಬ್, ಫೇಸ್ ಬುಕ್, 'ಕರಿಮಣಿ ಮಾಲೀಕ ನದ್ದೆ ವೀಡಿಯೋ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ. ಇದರ ಬೆನ್ನ ಹಿಂದೆ ಬೆಳಗಾವಿ ಜಿಲ್ಲೆ, ಮೂಡಲಗಿ ಪಟ್ಟಣದ ಖ್ಯಾತ ಶಬ್ಬಿರ್ ಡಾಂಗೆ ರಚಿಸಿ ಹಾಡಿರುವ 'ಕ-ರಿಮಣಿ ಮಾಲೀಕ ನಾನಲ್ಲಂತಿ... ಅಂತೂ ಇಂತೂ ಮುಗಸಾಕ... ನಿಂತಿ ನೀ ನನ್ನ ಸಂತಿ' ಎಂಬ ಹಾಡು ಸಿಕ್ಕಾಪಟ್ಟೆ ವೈರಲ್ ಆಗಿ ದಿನಬೆಳಗಾಗುವುದರಲ್ಲಿ ಲಕ್ಷಾಂತರ ವೀಕ್ಷಣೆ ಹಾಗೂ ಲೈಕ್ ಗಳು, ಕಮೆಂಟ್ ಗಳನ್ನು ಪಡೆದುಕೊಂಡುಬಿಟ್ಟಿದೆ.

ಹೌದು.....'ಓ... ನಲ್ಲಾ ನೀನಲ್ಲಾ ಕ-ರಿಮಣಿ ಮಾಲೀಕ ನೀನಲ್ಲ' ಎಂಬ ಹಾಡನ್ನು ಖ್ಯಾತ, ನಿರ್ದೇಶಕ, ನಿರ್ಮಾಪಕ ಉಪೇಂದ್ರ ರಚಿಸಿದ್ದು. ಇದಕ್ಕೆ ಸಂಗೀತ ಸಂಯೋಜನೆ ಗುರುಕಿರಣ್ ಮಾಡಿದ್ದಾರೆ. ಆದ-'ರೆ ಈ ನೀನಲ್ಲ' ಎಂಬ ಇತ್ತೀಚಿಗೆ ದಿನದಿಂದ ಹಾಡು ಬಹಳಷ್ಟು ಟ್ರೆಂಡ್ ಮಾಡಿ, ಅನೇಕ ಅನಾಹುತಗಳನ್ನು ಸೃಷ್ಟಿಸಿತ್ತು. ಅನೇಕ ಹದಿಹರೆಯದ ವಿವಾಹಿತ ತರುಣ-ತರುಣಿ ಯರು ಪ್ರೇಮಿಸಿ 'ಕರಿಮಣಿ ಮಾಲೀಕ ನೀನಲ್ಲಾ' ಎಂದು ಓಡಿ ಹೋಗಿ ಗಂಡ ಮತ್ತು ಮಕ್ಕಳನ್ನು ಬಿಟ್ಟು ಹೋಗಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ರಾಜ್ಯದ ಅನೇಕ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಒಟ್ಟಿನ ಮೇಲೆ 'ಕರಿಮಣಿ ಮಾಲೀಕ ನೀನಲ್ಲಾ ಎಂಬುದು ಸಿಕ್ಕಾಪಟ್ಟೆ ವೈರಲ್ ಆದ ಬೆನ್ನ ಹಿಂದೆ ಅನೇಕ ಜನಪದ ಹಾಡುಗಳು ಹುಟ್ಟಿಕೊಂಡು ಸಾಕಷ್ಟು ಟ್ರೆಂಡ್ ಮಾಡಿವೆ.

ಜನಪದ ಗಾಯಕ ಶಬ್ಬಿರ್ ಡಾಂಗೆ: ಕರಿಮಣಿ ಮಾಲೀಕ ನಾನಲ್ಲಂತಿ... ಉತ್ತರ ಕರ್ನಾಟಕದ ಪ್ರಮುಖ ಜನಪದ ಗಾರುಡಿಗ ಬೆಳಗಾವಿ ಜಿಲ್ಲೆಯ ಮೂಡಲಗಿ ಪಟ್ಟಣದ ಶಬ್ಬಿರ್ ಡಾಂಗೆ ಸ್ವಂತಃ ಹಾಡು ರಚಿಸಿ 'ಕರಿಮಣಿ ಮಾಲೀಕ ನಾನ ಲ್ಲಂತಿ ಅಂತೂ... ಇಂತೂ ಮೂಗಸಾಕ ನಿಂತಿ... ನೀ ನನ್ನ ಸಂತಿ' ಹಾಡಿದ್ದಾರೆ. ಹಾಡಿನಲ್ಲಿ ಸಮಾಜದ ತರುಣ- ತರುಣಿಯರಿಗೆ



ಅದ್ಭುತವಾದ ಕಿವಿಮಾತುಗಳಿವೆ. ಗಾಯಕ ಶಬ್ಬಿರ್ ಹಾಡು ಇಂದು ಯೂಟ್ಯೂಬ್ ಮತ್ತು ಇನ್ ಸ್ಟಾಗ್ರಾಂಗಳಲ್ಲಿ ಲಕ್ಷಾಂತರ ವೀಕ್ಷಣೆ ಮತ್ತು ಲೈಕ್ ಗಳನ್ನು, ಕಮೆಂಟ್ ಗಳನ್ನು ಕಂಡಿದೆ. ಹಾಡು ರಚನೆಯಾದ ಎರಡೇ ದಿನಗಳಲ್ಲಿ 'ಕರಿಮಣಿ ಮಾಲೀಕ ನಾನಲ್ಲಂತಿ' ಎಂಬ ಗುಣು... ಗುಣಿಸುವ ಸದ್ದು ಪಡ್ಡೆ ಹುಡುಗರಿಂದ ಹಿಡಿದು ವಯಸ್ಸಾದವರ ಬಾಯಲ್ಲಿ ಕೇಳಿಬರುತ್ತಿದೆ. ಕ್ರಿಯೇಟಿವ್ ಕಂಟೆಂಟ್ ಇತ್ತೀಚಿಗೆ ಯಾವುದಾದರೂ ಉತ್ತಮ ಕ್ರಿಯೇಟಿವ್ ಕಂಟೆಂಟ್ ಗಳಿದ್ದರೆ, ಅಂತಹ ವಿಷಯಗಳು ಸೋಷಿಯಲ್ ಮೀಡಿಯಾದಲ್ಲಿ ದಿನಬೆಳಗಾದರೆ ಸಾಕು ವೈರಲ್ ಆಗಿಬಿಡು ತ್ತವೆ. ಹೀಗೆ ಸೋಷಿಯಲ್ ಮೀಡಿಯಾದಲ್ಲಿ ದಿಢೀರನೆ ಜನ ಪ್ರಿಯರಾದವರಲ್ಲಿ ಜನಪದ ಹಾಡುಗಾರ ಉತ್ತರ ಕರ್ನಾಟಕದ ಶಬ್ಬಿರ್ ಡಾಂಗೆ ಪ್ರಮುಖರೆಂದು ಹೇಳಬಹುದು. ಇವರ ಜನಪದ ಹಾಡಿಗೆ ಲಕ್ಷಾಂತರ ನೆಟ್ಟಿಗರು ಮನಸೋತಿ-ದ್ದಾರೆ. ಉತ್ತರ ಕರ್ನಾಟಕ ಶೈಲಿಯ ಜನಪದ ಸೊಗಡಿನ ಗೀತೆಯನ್ನು ತಮ್ಮ ಕಂಚಿನ ಕಂಠದಿಂದ ಹಾಡುವ ಮೂಲಕ ಸುದ್ದಿಯಲ್ಲಿದ್ದಾರೆ. ಇಂದು ಜಾಗತೀಕರಣದ ಪ್ರಭಾವದಿಂದಾಗಿ ಜೀವನದ ಮೌಲ್ಯವನ್ನು ಪಸರಿಸುವಂತಹ ಅರ್ಥ ಗರ್ಭಿತವಾದ ಜನಪದ ಗೀತೆಗಳು ಕಣ್ಮರೆಯಾಗುವ ಇಂತಹ ಸಂದರ್ಭದಲ್ಲಿ ಜನಪದ ಗಾಯಕ ಶಬ್ಬಿರ್ ಅವರ ಕಂಠಸಿರಿಯಲ್ಲಿ ಮೂಡಿ ಬಂದ 'ಕರಿಮಣಿ ಮಾಲೀಕ ನಾನಲ್ಲಂತಿ' ನೆಟ್ಟಿಗರ ಮನ ಗೆದ್ದಿದೆ. ಈ ಹಿಂದೆಯೂ ಕೂಡಾ 'ಅನ್ಯಾಯಕಾರಿ ಬ್ರಹ್ಮ ಈ ಸುಂದರನ ಸನ್ಯಾಸಿ ಮಾಡಬಹುದೇ' ಎಂಬ ಜನಪದ ಹಾಡು ಸೋಷಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟಿ ಸದ್ದು ಮಾಡಿತ್ತು.

ಕರಿಮಣಿ ಮಾಲೀಕ ಹವಾ: ರಿಯಲ್ ಸ್ಟಾರ್ ಉಪೇಂದ್ರ ನಟನೆಯ ಉಪೇಂದ್ರ ಚಿತ್ರದ 'ಕರಿಮಣಿ ಮಾಲೀಕ ನೀನಲ್ಲ' ಹಾಡು ಸೆನ್ಸೆಷನ್ ಕ್ರಿಯೇಟ್ ಮಾಡಿತ್ತು. ಎಲ್ಲಿ ನೋಡಿದರಲ್ಲಿ ಹಾಡಿನದ್ದೇ ಹವಾ. ಈ ನಡುವೆ ಕರಿಮಣಿ ಮಾಲೀಕನ ಉತ್ತರ ಕರ್ನಾಟಕದ ಶೈಲಿಯ ಜಾನಪದ ಸೊಗಡಿನ ಹಾಡೊಂದು ಫುಲ್ ವೈರಲ್ ಆಗಿದೆ.

ಎಲ್ಲೆಡೆಗೆ ಶಬ್ಬಿರ್ ಹಾಡು ವೈರಲ್: ವೈರಲ್ ರೀಲ್ ವಿಡಿಯೋದಲ್ಲಿ ಗಾಯಕ ಶಬ್ಬಿರ್ ಡಾಂಗೆ ಅವರು ಹಾಡಿರುವ 'ಕರಿಮಣಿ ಮಾಲೀಕ ನಾನ ... ... ... .... ಕರಿಮಣಿ ಮಾಲೀಕನ ಬದಲಿಸ ಬೇಕಂತಿ. ಎಷ್ಟು ದಿನದಿಂದ ಇಂತಾ ಹೊಂಚಾಕಿ ಕುಂತಿ...' ಎಂಬ ಜನಪದ ಹಾಡು ಇದೀಗ ಫುಲ್ ವೈರಲ್ ಆಗಿದೆ. ನೆಟ್ಟಿಗರು ಲಕ್ಷಾಂತರ ಸಂಖ್ಯೆಯಲ್ಲಿ ಕ-ರಿಮಣಿ ರೀಲ್ಸ್ ಗೆ ಅಭಿನಂದಿಸಿದ್ದಾರೆ ಮತ್ತು ಮೆಚ್ಚುಗೆ ಸೂಚಿಸಿದ್ದಾರೆ. ಇವರ ಸಾವಿರಾರು ಜನಪದ ಹಾಡುಗಳು ಉತ್ತರ ಕರ್ನಾಟಕದ ತುಂಬ ಮನೆ ಮಾತಾಗಿವೆ.

## ಹೋಟೆಲ್ ಮ್ಯಾನೇಜ್ಮೆಂಟ್ ತರಬೇತಿ: ನೋಂದಣಿಗೆ ಆಹ್ವಾನ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ಆಸಕ್ತ ನಿರುದ್ಯೋಗ ಯುವಕ, ಯುವತಿಯರಿಗೆ ಹೋಟೆಲ್ ಮ್ಯಾನೇಜ್ಮೆಂಟ್ ತರಬೇತಿ ಹಮ್ಮಿಕೊಳ್ಳಲಾಗಿದೆ. ಆಸಕ್ತರು ನೋಂದಣಿ ಮಾಡಿಕೊಳ್ಳಬಹುದು.

ಹೋಟೆಲ್ ಮ್ಯಾನೇಜ್ಮೆಂಟ್ ಕ್ಷೇತ್ರದ ಹೌಸ್ಕೀಪಿಂಗ್ ಅಟೆಂಡೆಂಟ್, ಫುಡ್ ಮತ್ತು ಬೆವರೇಜ್ ಸರ್ವೀಸ್-ಸ್ಟೆವಾರ್ಡ್ ಜಾಬ್ ರೋಲ್ಗಳಲ್ಲಿ 45 ದಿನಗಳ ಸೂಕ್ತ ತರಬೇತಿಯನ್ನು ನೀಡಿ ಉದ್ಯೋಗಾವಕಾಶ ಕಲ್ಪಿಸಲು ಉದ್ದೇಶಿಸಲಾಗಿದೆ.

ತರಬೇತಿ ಅವಧಿಯಲ್ಲಿ ಬಳ್ಳಾರಿ ನಗರ ಹಾಗೂ ಜಿಲ್ಲೆಯ ಗ್ರಾಮೀಣ ಅಭ್ಯರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಳಿಸಿದ ನಂತರ ಪ್ರಮಾಣ ಪತ್ರವನ್ನು ನೀಡಲಾಗುವುದು. ತರಬೇತಿಯನ್ನು ಯಶ್ವಸಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಉದ್ಯೋಗ ಅವಕಾಶ ಕಲ್ಪಿಸಲಾಗುವುದು.

**ಅರ್ಹತೆಗಳು:**

ಅಭ್ಯರ್ಥಿಗಳು ಬಳ್ಳಾರಿ ಜಿಲ್ಲೆಯ ನಿವಾಸಿಯಾಗಿರಬೇಕು. ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಪಡೆದಿರಬೇಕು. ವಯೋಮಿತಿ 18 ರಿಂದ 30 ವರ್ಷದ ಒಳಗಿರಬೇಕು. ಅಭ್ಯರ್ಥಿಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದವರಾಗಿರಬೇಕು.

ಕಡ್ಡಾಯವಾಗಿ 45 ದಿನಗಳ ತರಬೇತಿಯನ್ನು ಪಡೆಯಬೇಕು.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತೆಯರ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು: ಮಂಗಳೂರು ಗ್ರಾಮಾಂತರ ವ್ಯಾಪ್ತಿಯಲ್ಲಿ 2023-24ನೇ ಸಾಲಿನ ಶಿಶು ಅಭಿವೃದ್ಧಿ ಯೋಜನೆಯಡಿ ಮಂಗಳೂರು, ಮುಲ್ಕಿ, ಉಳ್ಳಾಲ ಹಾಗೂ ಮೂಡಬಿದ್ರೆ ತಾಲೂಕಿನಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತೆಯರ ಹುದ್ಧೆಗೆ ಅರ್ಜಿ ಆಹ್ವಾನಿಸಲಾಗಿದೆ.

ಮಂಗಳೂರು ಗ್ರಾಮಾಂತರ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತ್ಗೆ ಒಬ್ಬರಂತೆ ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣ/ಅನುತ್ತೀರ್ಣರಾದ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತೆಯರ (ವಿ.ಆರ್.ಡ್ಲ್ಯೂ) ನೇಮಕ ಮಾಡಲು ಅವಕಾಶವಿದ್ದು 18 ರಿಂದ 45 ವರ್ಷ ವಯೋಮಿತಿಯೊಳಗಿನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಮಾಸಿಕ ಗೌರವಧನ ರೂ.9000 ನೀಡಲಾಗುತ್ತದೆ.

**ಖಾಲಿ ಇರುವ ಪುನರ್ವಸತಿ ಕೇಂದ್ರಗಳು:**

ಮಂಗಳೂರು ತಾಲೂಕಿನ ಮಲ್ಲೂರು ಗ್ರಾಮ ಪಂಚಾಯತ್, ಮೂಡಬಿದ್ರೆ ತಾಲೂಕಿನ ಪಡುಮಾರ್ನಾಡು, ಪಾಲಡ್ಕ, ಪುತ್ತಿಗೆ ಗ್ರಾಮ ಪಂಚಾಯತ್, ಮುಲ್ಕಿ ತಾಲೂಕಿನ ಹಳೆಯಂಗಡಿ ಗ್ರಾಮ ಪಂಚಾಯತ್ ಹಾಗೂ ಉಳ್ಳಾಲ ತಾಲೂಕಿನ ಅಂಬ್ಲಮೊಗರು ಗ್ರಾಮ ಪಂಚಾಯತ್ ಗಳಿಗೆ ಅರ್ಹ ವಿಕಲಚೇತನ ಅಭ್ಯರ್ಥಿಗಳು ಮಾರ್ಚ್ 20 ರೊಳಗೆ ನಗರದ ಬಿಜೈ ನಲ್ಲಿರುವ ಶಿಶು ಅಭಿವೃದ್ಧಿ ಯೋಜನೆ ಮಂಗಳೂರು ಗ್ರಾಮಾಂತರ, 1ನೇ ಮಹಡಿ ಜಿಲ್ಲಾ ಸ್ತ್ರೀಶಕ್ತಿ ಭವನ ಕಟ್ಟಡ ಇಲ್ಲಿಂದ ಅರ್ಜಿ ನಮೂನೆಯನ್ನು ಪಡೆದು ದ್ವಿಪ್ರತಿಯಲ್ಲಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಮಂಗಳೂರು ತಾಲೂಕು ಪಂಚಾಯತ್ ಎಂ.ಆರ್.ಡಬ್ಲ್ಯೂ ಜಯಪ್ರಕಾಶ್ ಇವರನ್ನು ಮೊಬೈಲ್ ಸಂಖ್ಯೆ 9110897458 ಸಂಪರ್ಕಿಸುವಂತೆ ಮಂಗಳೂರು ಗ್ರಾಮಾಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿಗಳಿಂದ ಕಡತ ವಿಲೇವಾರಿ ಪರಿಶೀಲನೆ

ಮಂಗಳೂರು: ಉಳ್ಳಾಲ ತಾಲೂಕಿನ ಆರ್‌ಆರ್ಟಿ ಮತ್ತು ಎಲ್‌ಎನ್ಡಿ, ಕಡತಗಳಿಗೆ ಸಂಬಂಧಿಸಿದಂತೆ ಮಂಗಳೂರು ತಾಲೂಕು ಕಛೇರಿ ಅಭಿಲೇಖಾಲಯದಲ್ಲಿ ಆಂದೋಲನವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಅವರು ಈ ಸಂದರ್ಭದಲ್ಲಿ ಭೇಟಿ ನೀಡಿ ಪರಿಶೀಲಿಸಿದರು ಮಂಗಳೂರು ತಾಲೂಕು ಕಚೇರಿಯ ಅಭಿಲೇಖಾಲಯದಲ್ಲಿ ಉಳ್ಳಾಲ ತಾಲೂಕಿನ ಗ್ರಾಮ ಆಡಳಿತ ಅಧಿಕಾರಿಗಳಿಗೆ, ಭೂ ಮಾಪನಾ ಇಲಾಖೆಯ ಸಿಬ್ಬಂದಿಗಳ, ಹಾಗೂ ಭೂದಾನಿ ಯವರ ಸಮ್ಮುಖದಲ್ಲಿ ಆರ್‌ಆರ್ಟಿ ಹಾಗೂ ಎಲ್‌ಎನ್ಡಿ, ಕಡತಗಳನ್ನು ಶ್ರೀಘ್ರ ವಿಲೇವಾರಿ ಮಾಡುವ ಬಗ್ಗೆ ಸೂಕ್ತ ನಿರ್ದೇಶನ ನೀಡಿದರು.ಆಂದೋಲನವನ್ನು ಯಶಸ್ವಿಯಾಗಿ ನಡೆಯುವಂತೆ ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಮಂಗಳೂರು ಸಹಾಯಕ ಆಯುಕ್ತ ಹರ್ಷವರ್ಧನ್ ಉಪಸ್ಥಿತರಿದ್ದರು.

## ಮನೋಹರ್ ಪ್ರಸಾದ್ ನಿಧನ: ಸ್ಪೀಕರ್, ಉಸ್ತುವಾರಿ ಸಚಿವರ ಸಂತಾಪ

ಮಂಗಳೂರು: ಹಿರಿಯ ಪತ್ರಕರ್ತ ಮನೋಹರ್ ಪ್ರಸಾದ್ ಅವರ ನಿಧನಕ್ಕೆ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸಂತಾಪ ವ್ಯಕ್ತಪಡಿಸಿದ್ದಾರೆ.

ಕರಾವಳಿಯ ಪತ್ರಿಕೋದ್ಯಮದಲ್ಲಿ ಮನೋಹರ್ ಪ್ರಸಾದ್ ಅವರ ಸಾಧನೆ ಅದ್ವಿತೀಯ. ಇಲ್ಲಿನ ಅಭಿವೃದ್ಧಿಯ ಬಗ್ಗೆ ಸದಾ ಕಾಳಜಿ ವಹಿಸಿ, ತಮ್ಮ ವರದಿಗಾರಿಕೆಯಲ್ಲಿ ಅದನ್ನು ಅವರು ತೋರಿಸುತ್ತಿದ್ದರು. ಅವಿಭಜಿತ ದ.ಕ. ಜಿಲ್ಲೆಗೆ ಅವರ ನಿಧನ ತುಂಬಲಾರದ ನಷ್ಟ ಎಂದು ಸ್ಪೀಕರ್ ತಮ್ಮ ಸಂತಾಪದಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಮ್ಮ ಸಂತಾಪದಲ್ಲಿ, ಪತ್ರಕರ್ತರಿಗೆ ಸದಾ ಮಾದರಿ ವ್ಯಕ್ತಿಯಾಗಿದ್ದ ಮನೋಹರ್ ಪ್ರಸಾದ್, ವೃತ್ತಿ ಗೆ ಘನತೆ, ಗೌರವ ತಂದವರು. ಕರಾವಳಿಯ ಮೇರು ವ್ಯಕ್ತಿಯಾಗಿ ಇಲ್ಲಿನ ಪರಿಸರ, ಜಲ, ನೆಲದ ಬಗ್ಗೆ ಕಾಳಜಿ ಹೊಂದಿದ್ದರು ಎಂದು ಕಂಬನಿ ಮಿಡಿದಿದ್ದಾರೆ.

## ಬಸವ ಜಯಂತಿ ಪೂರ್ವಭಾವಿಯ ಸಭೆ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಘಟಕ ಬೆಳಗಾವಿ ಹಾಗೂ ವಿವಿಧ ಸಂಘಟನೆಗಳು 2024ನೇಯ ಈ ವರ್ಷದ ಅದ್ದೂರಿಯಾಗಿ ಬಸವ ಜಯಂತಿ ಉತ್ಸವವನ್ನು ಬೆಳಗಾವಿ ಮಹಾನಗರದಲ್ಲಿ ಆಚರಿಸುವ ನಿಮಿತ್ತ ದಿನಾಂಕ 05-03-2024ರಂದು ಮಂಗಳವಾರ ಸಂಜೆ 4.30 ಕ್ಕೆ ಶಿವಬಸವನಗರದಲ್ಲಿರುವ ಲಿಂಗಾಯತ ಭವನದಲ್ಲಿ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಪೂರ್ವಭಾವಿಯಾಗಿ ಸಭೆ ನಡೆಯಲಿದೆ.

ಬಸವಾಭಿಮಾನಿಗಳು ಸಭೆಗೆ ಆಗಮಿಸಿ ಬಸವ ಜಯಂತಿ ಯಶಸ್ವಿಗೊಳಿಸಲು ಸಲಹೆ ಸೂಚನೆ ನೀಡಬೇಕೆಂದು ಎಲ್ಲ ಬಸವಾಭಿಮಾನಿಗಳಿಗೆ ಸಭೆಗೆ ಹಾಜರಿರಬೇಕಾಗಿ ವಿನಂತಿಸಿಕೊಳ್ಳುತ್ತೇವೆ. ಪ್ರಧಾನಕಾರ್ಯದರ್ಶಿ ಶ್ರೀ ಅಣ್ಣಾಸಾಹೇಬ ಬ ಕೊರಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿ ವರದಿ
SATURDAY, 02 MARCH 2024

# ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ; ಪಲ್ಸ್ ಪೇಲಿಯೊ ಕಾರ್ಯಕ್ರಮ ಯಶಸ್ವಿಗೊಳಿಸಿ: ಜಿಪಂ ಸಿಇಓ ರಾಹುಲ್ ಶರಣಪ್ಪ ಸಂಕನೂರ

ಬಳ್ಳಾರಿ: ಜಿಲ್ಲೆಯಲ್ಲಿ ಮಾರ್ಚ್ 3 ರಂದು ಜರುಗುವ ರಾಷ್ಟ್ರೀಯ ಪಲ್ಸ್ ಪೇಲಿಯೊ ಲಸಿಕಾ ಕಾರ್ಯಕ್ರಮದಲ್ಲಿ ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಲಸಿಕೆಯನ್ನು ಹಾಕಿಸುವ ಮೂಲಕ ಜಿಲ್ಲೆಯಲ್ಲಿ ನೂರರಷ್ಟು ಗುರಿ ಸಾಧಿಸಲು ಎಲ್ಲರೂ ಕೈ ಜೋಡಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ನಜೀರ್ಸಾಬ್ ಸಭಾಂಗಣದಲ್ಲಿ ಗುರುವಾರ ನಡೆದ ರಾಷ್ಟ್ರೀಯ ಪಲ್ಸ್ ಪೇಲಿಯೋ ಜಿಲ್ಲಾ ಸಮನ್ವಯ ಸಮಿತಿ ಎರಡನೇ ಸಭೆ, ಜಿಲ್ಲಾ ಆರೋಗ್ಯ ಸಂಘದ ಸಭೆ ಮತ್ತು ಇತರೆ ಕಾರ್ಯಕ್ರಮಗಳ ಅನುಷ್ಠಾನ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ಈಗಾಗಲೇ ನಿಗದಿಪಡಿಸಿರುವಂತೆ 1,97,103 ಮಕ್ಕಳಿಗೆ ಲಸಿಕೆಯನ್ನು ಹಾಕುವ ಯೋಜನೆ ರೂಪಿಸಿದ್ದು, ಪೂರ್ವ ಸಿದ್ಧತೆಯಂತೆ ಮೊದಲ ದಿನವೇ ಶೇ.100ರಷ್ಟು ಗುರಿಯನ್ನು ತಲುಪಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಸೂಚಿಸಿದರು.

ನಗರ ಮತ್ತು ಗ್ರಾಮೀಣ ಮಟ್ಟದಲ್ಲಿ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಮೈಕಿಂಗ್, ಗ್ರಾಮಗಳಲ್ಲಿ ಡಂಗೂರ ಹಾಕಿಸುವುದು, ಶಾಲಾ ಮಕ್ಕಳಿಂದ ಜಾಥಾ ಮೂಲಕ ಜನತೆಗೆ ಹೆಚ್ಚು ಮಾಹಿತಿಯನ್ನು ಒದಗಿಸುವ ಮೂಲಕ ಹೆಚ್ಚಿನ ಪ್ರಚಾರ ಕೈಗೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ವೈ.ರಮೇಶ್ಬಾಬು ಅವರು ಮಾತನಾಡಿ, ಮಾ.03 ರಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೇಲಿಯೋ ದಿನದಂದು ಜಿಲ್ಲೆಯಾದ್ಯಂತ 968 ಬೂತ್ಗಳು, 887 ಮನೆ ಭೇಟಿ ತಂಡಗಳು, 51 ಟ್ರಾನ್ಸಿಟ್ ತಂಡಗಳು, 17 ಸಂಚಾರಿ ತಂಡಗಳನ್ನು ರಚಿಸಿದ್ದು, ಒಟ್ಟು 1970 ಜನ ಲಸಿಕೆ ಹಾಕುವ ತಂಡದಲ್ಲಿ ಕಾರ್ಯನಿರ್ವಹಿಸಲಿದ್ದು, 185 ಜನ ಮೇಲ್ವಿಚಾರಣೆ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮ ದಿನದಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರು ಮತ್ತು ಜನಪ್ರತಿನಿಧಿಗಳನ್ನು ಆಹ್ವಾನಿಸುವ ಮೂಲಕ ಎಲ್ಲಾ ತಾಲ್ಲೂಕು, ಪಂಚಾಯತ್ ಮಟ್ಟದಲ್ಲಿ ಚಾಲನೆ ನೀಡಲು ಕ್ರಮವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಇತ್ತೀಚೆಗೆ ಕೇಂದ್ರ ಸರ್ಕಾರವು ಹಾವು ಕಡಿತವನ್ನು ನೋಟಿಫೈಡ್ ಕಾಯಿಲೆ ಎಂದು ಘೋಷಣೆ ಮಾಡಿದ ಹಿನ್ನಲೆಯಲ್ಲಿ ಹಾವು ಕಡಿತದ ಮುಂಜಾಗ್ರತೆ ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲಾಯಿತು.

ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವ ಕುರಿತು ಹಾಗೂ ಆಶಾ ಕಾರ್ಯಕರ್ತೆಯರ ಕುಂದುಕೊರತೆ ಬಗ್ಗೆ ಸಭೆಯಲ್ಲಿ ಚರ್ಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಭೆ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಜಿಲ್ಲಾ ಆರ್ಸಿಹೆಚ್ ಅಧಿಕಾರಿ ಡಾ.ಆರ್.ಅನಿಲ್ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆಸ್ಪತ್ರೆಯ ಡಾ.ಗುರುನಾಥ.ಬಿ ಚವ್ಹಾಣ್, ವಿಮ್ಸ್ ತಜ್ಞರಾದ ಡಾ.ಅನಂತ ಆಚಾರ್ ಸೇರಿದಂತೆ ಪಶುಸಂಗೋಪನಾ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಇತರೆ ಇಲಾಖೆ ಅಧಿಕಾರಿಗಳು ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

## ಮಾ.03 ರಂದು ರಾಜ್ಯ ಮಟ್ಟದ ಸರ್ಕಾರಿ ಮುಸ್ಲಿಂ ನೌಕರರ ಮಹಾ ಸಮ್ಮೇಳನ ಹಾಗೂ ವಿವಿಧ ಯೋಜನೆಗಳ ಅರಿವು ಕಾರ್ಯಾಗಾರ

ಬೆಳಗಾವಿ; ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ಹಾಗೂ ಜಿಲ್ಲಾ ಘಟಕ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಮಾ. 3 ರಂದು ಬೆಳಗಾವಿಯ ಸನ್ಮಾನ ಹೋಟೆಲ್ ಹತ್ತಿರದ ಗಾಂಧಿ ಭವನದಲ್ಲಿ ಬೆಳಿಗ್ಗೆ 10.15 ರಿಂದ ಸಂಜೆ 5 ಗಂಟೆಯವರೆಗೆ ರಾಜ್ಯ ಮಟ್ಟದ ಸರ್ಕಾರಿ ಮುಸ್ಲಿಂ ನೌಕರರ ಮಹಾ ಸಮ್ಮೇಳನ, ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಹಾಗೂ ಶೈಕ್ಷಣಿಕ, ಔದ್ಯೋಗಿಕ ಯೋಜನೆಗಳ ಅರಿವು ಕಾರ್ಯಾಗಾರ ನಡೆಯಲಿದೆ.

ಬೆಂಗಳೂರು ವಿಧಾನ ಸಭೆ ಸಭಾಧ್ಯಕ್ಷರಾದ ಯು.ಟಿ ಖಾದರ್ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಳಗಾವಿ ಉತ್ತರ ವಿಧಾನ ಸಭೆ ಮತ ಕ್ಷೇತ್ರದ ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆಯನ್ನು ವಹಿಸಲ್ಲಿದ್ದಾರೆ.

ಬೆಳಗಾವಿ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ ಜಾರಕಿಹೊಳಿ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಅಲ್ಪಸಂಖ್ಯಾತರ ಕಲ್ಯಾಣ ವಕ್ಫ ಇಲಾಖೆ ವಸತಿ ಸಚಿವರಾದ ಬಿ ಝಡ್ ಜಮೀರ್ ಅಹ್ಮದ್ಖಾನ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ, ಪೌರಾಡಳಿತ ಹಾಗೂ ಹಜ್ ಇಲಾಖೆ ಸಚಿವ ರಹೀಮ್ ಖಾನ್, ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹ್ಮದ್ ಅವರು ಮುಖ್ಯ ಅಥಿತಿಗಳಾಗಿ ಆಗಮಿಸಲಿದ್ದಾರೆ.

ಅದೇ ರೀತಿಯಲ್ಲಿ ಮೈಸೂರು ನರಸಿಂಹರಾಜ ಕ್ಷೇತ್ರ ಹಾಗೂ ಮಾಜಿ ಸಚಿವರಾದ ತನ್ವೀರ್ ಸೇಠ್, ಕರ್ನಾಟಕ ಸರ್ಕಾರದ (ನವದೆಹಲಿ) ವಿಶೇಷ ಪ್ರತಿನಿದಿ–2 ಪ್ರಕಾಶ ಹುಕ್ಕೇರಿ. ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಶಾಂತಿ ನಗರ ಶಾಸಕಾರದ ಎನ್.ಎ ಹಾರಿಸ್, ರಾಜ್ಯ ಸಭೆ ಸದಸ್ಯರಾದ ಸೈಯ್ಯದ್ ನಾಸಿರ್ ಹುಸೇನ್, ಕರ್ನಾಟಕ ಪವಾಸೋದ್ಯಮ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಕನೀಜ್ ಫಾತಿಮಾ ಅವರು ಮುಖ್ಯ ಅಥಿತಿಗಳಾಗಿ ಆಗಮಿಸಲಿದ್ದಾರೆ.

ಗೌರವಾನ್ವಿತ ಅತಿಥಿಗಳಾಗಿ ವಿಧಾನ ಪರಿಷತ್ತು ಸಚೇತಕರಾದ ಸಲೀಮ್ ಅಹ್ಮದ್. ಬೆಂಗಳೂರು ಶಿವಾಜಿ ನಗರದ ಶಾಸಕರಾದ ರಿಜ್ವಾನ್. ವಿಧಾನ ಪರಿಷತ್ ಸದಸ್ಯ ಅಬ್ದುಲ್ ಅಜೀಮ್. ರಾಮನಗರ ಶಾಸಕ ಇಕ್ಬಾಲ್ ಹುಸೇನ್. ಬೆಂಗಳೂರು ರಾಜ್ಯ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷರಾದ ಅಬ್ದುಲ ಅಜೀಮ. ಬೆಂಗಳೂರು ವಕ್ಫ ಮಂಡಳಿ ಅಧ್ಯಕ್ಷರಾದ ಅನ್ವರ್ ಬಾಷಾ. ಹುಬ್ಬಳ್ಳಿ ಇಸ್ಲಾಂ ಅಂಜುಮನ್ ಸಚಿವ ಅಬ್ದುಲ್ ಹಕೀಮ ಹಿಂಡಸಗೇರಿ ಅವರು ಆಗಮಿಸಲಿದ್ದಾರೆ.

ಕರ್ನಾಟಕ ಸರಕಾರದ ಅಪರ ಕಾರ್ಯದರ್ಶಿಗಳಾದ ಎಲ್. ಕೆ ಅತೀಕ್. ಕರ್ನಾಟಕ ಸರಕಾರದ ಕಾರ್ಮಿಕ ಇಲಾಖೆ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ಕರ್ನಾಟಕ ಸರಕಾರದ ಆರ್ಥಿಕ ಇಲಾಖೆ ಕಾರ್ಯದರ್ಶಿ, ಡಾ. ಪಿ.ಸಿ ಜಾಫರ. ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್. ಬೆಳಗಾವಿ ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಶಿಂಧೆ. ಹೆಸ್ಕಾಮ್ ವ್ಯವಸ್ಥಾಪಕ ನಿರ್ದೇಶಕ ರೋಶನ್ ಜಮೀರ್, ತುಮಕೂರು ಪೊಲೀಸ್ ಕಮಾಂಡೆಂಟ್ (ಆರ್ಪಿ. ಎಫ್) ಹಮಜಾ ಹುಸೇನ್ ದಖನಿ.

ಬೆಂಗಳೂರು ಅಲ್ಪಸಂಖ್ಯಾತರ ನಿರ್ದೇಶನಾಲಯ ನಿರ್ದೇಶಕ ಜಿಲಾನಿ ಮೋಕಾಶಿ. ಏಉಖ ಒಇಫಂ ಮಾಜಿ ಅಧ್ಯಕ್ಷ ಕೆ ಅಬ್ದುಲ್ ರಹೀಮ್. ಬೆಂಗಳೂರು ಕರ್ನಾಟಕ ಸರಕಾರ (ಕಾನೂನು ವ್ಯವಹಾರಗಳು) ವಾಣಿಜ್ಯ ತೆರಿಗೆಗಳ ಇಲಾಖೆ ಅಪರ ಆಯುಕ್ತ (ಏಖಖಿಖ) ಮಿರ್ಜಾ ಅಜ್ಮತುಲ್ಲಾ, ಬೆಂಗಳೂರು ಕೆಎಮ್ಡಿಸಿ ವ್ಯವಸ್ಥಾಪಕರಾದ ನಜೀರ ಅಹ್ಮದ್. ಇಂಟರ ನ್ಯಾಷನಲ್ ವೆಟ್ ಲಿಫ್ಟಿಂಗ್ ಚಾಂಪಿಯನ್ ಖುದ್ಸಿಯಾ ನಜೀರ್ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ಹಾಗೂ ಬೆಳಗಾವಿ ಜಿಲ್ಲಾ ಘಟಕ ಪ್ರಕಟಣೆಯಲ್ಲಿ ತಿಳಿಸಿದೆ.

## ಗ್ಯಾರಂಟಿ ಯೋಜನೆಗಳ ಕುರಿತು ಬೀದಿನಾಟಕ ಪ್ರದರ್ಶನ



ಬಳ್ಳಾರಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳ ಕುರಿತು ಧಾತ್ರಿ ರಂಗ ಸಂಸ್ಥೆಯ ಕಲಾ ತಂಡದವರಿಂದ ಶುಕ್ರವಾರ ಸಂಡೂರು ತಾಲೂಕಿನ ಡಿ.ಅಂತಾಪುರ, ಕೋಡಾಲು ಗ್ರಾಮಗಳಲ್ಲಿ ಬೀದಿನಾಟಕ ಪ್ರದರ್ಶಿಸಿದರು.

ಕಲಾವಿದರು ಗ್ರಾಮದಲ್ಲಿ ಸಂಚರಿಸಿ, ತಮಟೆ ಬಾರಿಸಿ, ಹಾಡು ಹೇಳುವ ಮೂಲಕ ಮತ್ತು ನಾಟಕ ಪ್ರದರ್ಶನ ಮೂಲಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಮೂಡಿಸಿದರು.

ಗ್ರಾಮದಲ್ಲಿ ಶುಚಿತ್ವ, ನೀರಿನ ಮಿತ ಬಳಕೆ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಜನ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ನ ಸದಸ್ಯರು, ಮುಖಂಡರು ಮತ್ತು ಅಧಿಕಾರಿ ವರ್ಗದವರು, ಸಾರ್ವಜನಿಕರು ಉಪಸ್ಥಿತರಿದ್ದರು.

## ವಿಎಸ್ಕೆ ವಿವಿಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ

ಬಳ್ಳಾರಿ: ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ವತಿಯಿಂದ ಗುರುವಾರ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಖಗೋಳ ವಿಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ಜಿಲ್ಲೆಯ ಮಲ್ಲಯ್ಯ ಎಂಬ ವ್ಯಕ್ತಿಯನ್ನು ವಿಭಾಗಕ್ಕೆ ಆಹ್ವಾನಿಸಿ ಅವರಲ್ಲಿ ಅಡಗಿರುವ ವಿಜ್ಞಾನ ಕ್ಷೇತ್ರದ ಕೌತುಕಗಳ ಕುರಿತು ವಿಭಾಗದ ವಿದ್ಯಾರ್ಥಿಗಳಿಗೆ ವಿವಿಧ ಆಯಾಮಗಳಲ್ಲಿ ಮಾಹಿತಿ ವಿನಿಯೋಗ ನಡೆಸಿದರು. ಶಾಲಾ ಮಟ್ಟದ ಶಿಕ್ಷಣ ಮಾತ್ರ ಪೂರೈಸಿರುವ ಮಲ್ಲಯ್ಯ ಅವರು ಖಗೋಳ ವಿಜ್ಞಾನ ಕುರಿತು ತಮ್ಮಲ್ಲಿರುವ ವಿಸ್ಮಯಕಾರಿ ವಿಷಯಗಳ ಜ್ಞಾನವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು.

ಜನಸಾಮಾನ್ಯರಿಗೆ ವಿಜ್ಞಾನದ ಅರಿವು ಮೂಡಿಸುವುದು ಮತ್ತು ಸಾಮಾನ್ಯ ಜನತೆಯಲ್ಲಿ ವಿಜ್ಞಾನದ ಬಗ್ಗೆ ಕುತೂಹಲ ಹೊಂದಿರುವ ವ್ಯಕ್ತಿಯನ್ನು ಗುರುತಿಸಿ ಅವರ ಜ್ಞಾನಕ್ಕೆ ವೇದಿಕೆ ಕಲ್ಪಿಸುವ ವಿನೂತನ ಪ್ರಯೋಗವು ವಿವಿ ವತಿಯಿಂದ ಮಾಡುತ್ತಿರುವುದು ಸಂತಸವಾಗಿದೆ ಎಂದರು.

ಪ್ರಸ್ತುತ ದಿನಗಳಲ್ಲಿ ವಿಜ್ಞಾನದ ಮಹತ್ವ ಕುರಿತು ಜನರಲ್ಲಿ ಅರಿವು ಮೂಡಿಸುವುದು, ವಿಜ್ಞಾನ ಕ್ಷೇತ್ರಕ್ಕೆ ಭಾರತದ ಕೊಡುಗೆ ಮತ್ತು ಪ್ರತಿನಿತ್ಯವೂ ವಿಜ್ಞಾನ ಕ್ಷೇತ್ರದಲ್ಲಿ ನಡೆಯುತ್ತಿರುವ ನ್ಯಾನೊಮಟಿ–



ರಿಯಲ್ಸ್ ಆ್ಯಂಡ್ ಇಟ್ಸ್ ಅಪ್ಲಿಕೇಶನ್ಸ್ನ ಇತ್ತೀಚಿನ ಆಯಾಮಗಳ ಕುರಿತು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ವಿಶ್ವವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ. ಅರುಣಕುಮಾರ ಲಗಶೆಟ್ಟಿ ಹೇಳಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ವಿಜ್ಞಾನ ದಿನದ ಪ್ರಯುಕ್ತ ಇತ್ತೀಚೆಗೆ ಜರುಗಿದ್ದ 'ಪೋಸ್ಟರ್ ಪ್ರದರ್ಶನ'ದಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಭೌತಶಾಸ್ತ್ರ ವಿಭಾಗ ಮುಖ್ಯಸ್ಥರಾದ ಪ್ರೊ. ತಿಪ್ಪೇರುದ್ರಪ್ಪ, ಪ್ರೊ.ಖಡ್ಕೆ ಉದಯಕುಮಾರ್, ಸಹಾಯಕ ಪಾಧ್ಯಾಪಕ ಡಾ.ಕೊಟ್ರೇಶ್ ಎಮ್.ಜಿ., ಡಾ.ಅವಿನಾಶ ಹಾಗೂ ಸಿಬ್ಬಂದಿ, ಸಂಶೋಧನಾರ್ಥಿಗಳು, ವಿದ್ಯಾರ್ಥಿಗಳು ಇದ್ದರು.

## ವೈಯಕ್ತಿಕ ನೃತ್ಯ ಸ್ಪರ್ಧೆ

ಹುಕ್ಕೇರಿ: ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಹಾಗೂ ಜಯಭಾರತ ಫೌಂಢೇಶನ, ಬೆಳಗಾವಿ ಇವರ ಸಹಯೋಗದಲ್ಲಿ ಮಹಾಶಿವರಾತ್ರಿ ನಿಮಿತ್ಯ ಹಾಗೂ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಹುಕ್ಕೇರಿ ತಾಲೂಕಿನ ಯರಗಟ್ಟಿ ಗ್ರಾಮದ ಕರ್ನಾಟಕ ಪಬ್ಲಿಕ ಶಾಲೆಯ ಆವರಣದಲ್ಲಿ ವೈಯಕ್ತಿಕ ನೃತ್ಯ ಸ್ಪರ್ಧೆಯನ್ನು ಶುಕ್ರವಾರ ಮಾರ್ಚ 08 ರಂದು ಸಾಯಂಕಾಲ 6.00 ಗಂಟೆಗೆ ಆಯೋಜಿಸಲಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಆಕರ್ಷಕ ಬಹುಮಾನ ನೀಡಲಾಗುವುದು. ಭಾಗವಹಿಸಿದ ಪ್ರತಿಯೊಬ್ಬರಿಗೂ ಪ್ರಮಾಣ ಪತ್ರ ನೀಡಲಾಗುವುದು ಆಸಕ್ತರು ಮಂಗಳವಾರ ದಿನಾಂಕ 05–03–2024 ರ ಒಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು ಎಂದು ಗೌರವ ಕಾರ್ಯದರ್ಶಿಗಳು ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಾಯಿಸಲು 9590551177 ಸಂಪರ್ಕಿಸಿರಿ.

## ವ್ಯಕ್ತಿಗೆ ಮರುಜೀವ ನೀಡಿ ಮಾನವೀಯತೆ ಮೆರೆದ ಆ್ಯಂಬುಲೆನ್ಸ್ ಚಾಲಕ

ಮೂಡಲಗಿ: ಸಾವು ಬದುಕಿನ ನಡುವೆ ಹೋರಾಡುತ್ತಿದ್ದ ವ್ಯಕ್ತಿಗೆ ಆ್ಯಂಬುಲೆನ್ಸ್ ಚಾಲಕನೊಬ್ಬ ಮರುಜೀವ ನೀಡಿದ ಮಾನವೀಯ ಘಟನೆ ಸಮೀಪದ ಹಳ್ಳೂರ ಗ್ರಾಮದ ರೇವಣ ಸಿದ್ದೇಶ್ವರ ನಗರದಲ್ಲಿ ನಡೆದಿದೆ.

ಮಧ್ಯರಾತ್ರಿ ಬೈಕ್ಗಳ ನಡುವೆ ಮುಖಾಮುಖಿ ಡಿಕ್ಕಿಯಾಗಿ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಪಿ.ಜಿ. ಹುಣಶ್ಯಾಳ ಗ್ರಾಮದ ದುರ್ಗಪ್ಪ ಮಾದೇವ ಮೇತ್ರಿ ಎಂಬಾತ ಗಂಭೀರ ಗಾಯಗೊಂಡು ತೀವ್ರ ರಕ್ತಸ್ರಾವವಾಗಿ ಮಾತನಾಡಲು ಸಾಧ್ಯವಾಗದ ಸ್ಥಿತಿಯಲ್ಲಿ ಸಾವು ಬದುಕಿನ ನಡುವೆ ಹೋರಾಡುತ್ತಿರುವಾಗ ಅಪದ್ಬಾಂಧವಾಗಿ ಬಂದ ಶಾಸಕ ಬಾಲಚಂದ್ರ ಜಾರಕಿಹೊಳಿ




ಅವರ ಆ್ಯಂಬುಲೆನ್ಸ್ ಚಾಲಕ ಸದಾಶಿವ ಸೋಮಲಿಂಗಪ್ಪ ಹಾದಿಮನಿ ತನ್ನ ಪ್ರಾಣದ ಹಂಗು ತೊರೆದು ಒಂದು ಜೀವವನ್ನು ಉಳಿಸಬೇಕೆನ್ನುವ ಮಾನವೀಯ ಗುಣದಿಂದ ಗಾಯಳುವನ್ನು ಕೇವಲ 5 ನಿಮಿಷಗಳಲ್ಲಿ ಮೂಡಲಗಿಯ ಡಾ. ಹೊಂಗಲ ಆಸತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾನೆ.

ಜನ ಸೇವೆಯೆ ಜನಾರ್ಧನ ಸೇವೆ ಎಂಬ ಗಾದೆ ಮಾತಿನಂತೆ ಒಂದು ಪ್ರಾಣ ಉಳಿಸಿದ ಅಂಬ್ಯುಲೆನ್ಸ್ ಚಾಲಕ ಸದಾಶಿವ ಹಾದಿಮನಿ ಅವರ ಈ ಕಾರ್ಯಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿ ಹಾಗೂ ಸಾರ್ವಜನಿಕರು ಮೆಚ್ಚಿಗೆ ವ್ಯಕ್ತ ಪಡಿಸಿದ್ದಾರೆ.

ಸದಾಶಿವ ಹಾದಿಮನಿ ಅವರು ಈ ರೀತಿ ಹಲವು ಜೀವ ಉಳಿಸಲು ಕಾರಣರಾಗಿದ್ದಾರೆ. ಸ್ವಾರ್ಥದ ಬದುಕಿನ ನಡುವೆ ಇಂತಹ ಮಾನವೀಯ ಮೌಲ್ಯಗಳನ್ನು ಹೊಂದಿರುವ ಇಂತಹ ವ್ಯಕ್ತಿಗಳು ನಮ್ಮ ನಡುವೆ ಇರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ.

## ಸಾಹಿತ್ಯದ ಸಾಧನೆಯಲ್ಲಿ ತನ್ಮಯತೆ ಮುಖ್ಯ

ಬೆಳಗಾವಿ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡಭವನದ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದಲ್ಲಿ ನಡೆದ ಬೆಳಗಾವಿ ಜಿಲ್ಲೆಯ ಶತಮಾನ ಕಂಡ ಸಾಹಿತಿಗಳು ಎಂಬ ತಿಂಗಳ ಸರಣಿ ಕಾರ್ಯಕ್ರಮದಲ್ಲಿ ಡಾ//ನಾಗರಾಜ್ ಮರೆನ್ನವರ ಇವರು ಉಪನ್ಯಾಸಕರಾಗಿ ಮಾತನಾಡುತ್ತಾ "ಡಾ// ಆದಿನಾಥ್ ನೇಮಿನಾಥ್ ಉಪಾಧ್ಯೆ ಎಂಬ ಹಿರಿಯ ಸಾಹಿತಿಗಳು ಕನ್ನಡ ಸಾರಸ್ವತ ಲೋಕಕ್ಕೆ ಕೊಟ್ಟಿರುವ ಕೊಡುಗೆ ಅಪಾರ. ಆ.ನೇ ಉಪಾಧ್ಯೆ ಇವರು ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಸದಲಗೆ ಎಂಬ ಗ್ರಾಮದಲ್ಲಿ 1906ಫೆಬ್ರುವರಿ 6 ರಂದು ಜನಿಸಿದರು.

ಬೆಳಗಾವಿಯ ಜಿ.ಎ ಹೈ ಸ್ಕೂಲ್ ನಲ್ಲಿ ತಮ್ಮ ಪ್ರೌಢ ಶಿಕ್ಷಣವನ್ನು ಮುಗಿಸಿದ ಇವರು ಮುಂದೆ ಉನ್ನತ ವ್ಯಾಸಂಗದ ವಿದ್ಯಾಭ್ಯಾಸವನ್ನು ಮಹಾರಾಷ್ಟ್ರದಲ್ಲಿ ಮುಂದುವರಿಸಿದರು. ಡಾ// ಆ.ನೇ. ಉಪಾಧ್ಯೆ ಇವರು ದಿಗಂಬರ ಜೈನ



ಸಮಾಜದ ಮನೆಯಲ್ಲಿ ಇದ್ದ ಪ್ರಾಚೀನ ಗ್ರಂಥಗಳ ತಾಡ ಓಲೆಯ ಪುಸ್ತಕಗಳ ಸಂಗ್ರಹದ ವಿದ್ಯೆ ಅವರ ಅಧ್ಯಯನದ ಬದುಕನ್ನು ಬೆಳಗಿತು. ಓದುವಾಗಲೇ ಉಪಾಧ್ಯೆ ತಮ್ಮ ಜೀವನವನ್ನು ಪ್ರಾಕೃತ ಭಾಷೆಯ ಅಧ್ಯಯನಕ್ಕೆ ಮೀಸಲಿಟ್ಟರು. ಕೇವಲ ನಮ್ಮ ರಾಜ್ಯದಲ್ಲಿ ಅಷ್ಟೇ ಅಲ್ಲದೆ ಅಂತರ್ ರಾಜ್ಯದಲ್ಲಿಯೂ ಕೂಡ ಕನ್ನಡ ಸಾಹಿತ್ಯದ ಬಗ್ಗೆ ಬೆಳಕನ್ನು ಚೆಲ್ಲಿದರು, ಅಲ್ಲದೆ ವಿದೇಶಗಳಲ್ಲಿಯೂ ಕೂಡ ಸಾಕಷ್ಟು ಕನ್ನಡ ಪರ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಉಪನ್ಯಾಸವನ್ನು ನೀಡಿದ್ದಾರೆ.

ಸಾಹಿತ್ಯದ ಕ್ಷೇತ್ರದಲ್ಲಿ ನಮ್ಮನ್ನು ನಾವು ತನ್ಮಯತೆಯಿಂದ ತೊಡಗಿಸಿಕೊಂಡರೆ ಅಪಾರವಾದ ಯಶಸ್ಸನ್ನು ಗಳಿಸಬಹುದು ಎಂಬ ತತ್ವದಲ್ಲಿ ಅಚಲವಾದ ನಂಬಿಕೆಯನ್ನು ಇಟ್ಟಿದ್ದರು. ಎಂದು ಅಭಿಪ್ರಾಯಪಟ್ಟರು. ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಬೆಳಗಾವಿ ಜಿಲ್ಲಾ ಅಧ್ಯಕ್ಷರಾದ ಶ್ರೀಮತಿ ಮಂಗಲ ಶ್ರೀ ಮೆಟಗುಡ್ಡ ಇವರು ಮಾತನಾಡಿ ಡಾ// ಆ.ನೇ ಉಪಾಧ್ಯಾಯ ಇವರು ಸಂಸ್ಕೃತ ಭಾಷೆಯಲ್ಲಿಯೂ ಕೂಡ ಅನೇಕ ಗ್ರಂಥಗಳನ್ನು ರಚಿಸಿದ್ದಾರೆ, ಅವರು ಇಂದಿನ ಸಾಹಿತಿಗಳಿಗೆ ಮಾದರಿಯಾಗಿದ್ದಾರೆ ಎಂದು ಮಾತನಾಡುತ್ತಾ ಶ್ರೇಷ್ಠ ಸಾಹಿತಿಗಳ ಕಾರ್ಯಕ್ರಮಗಳಲ್ಲಿ ಇಲ್ಲಿನ ಸಾಹಿತಿಗಳು ಭಾಗವಹಿಸದೇ ಇರುವುದು ಅತ್ಯಂತ ವಿಷಾದನೀಯ ಎಂದು ತಮ್ಮ ಕಳವಳವನ್ನು ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಮುಂದಿನ ತಿಂಗಳ ಸಾಹಿತಿಗಳ ಕಾರ್ಯಕ್ರಮದಲ್ಲಿ ಎಲ್ಲರೂ ತಪ್ಪದೇ ಭಾಗವಹಿಸಿ ಸದುಪಯೋಗವನ್ನು ಪಡೆದು ಕೊಳ್ಳಬೇಕೆಂದು ಎಲ್ಲರಲ್ಲಿ ವಿನಂತಿಸಿದರು. ಜಿಲ್ಲಾ ಕಾರ್ಯದರ್ಶಿಗಳಾದ ಶ್ರೀ ಎಂ ವೈ ಮೆಣಸಿನಕಾಯಿ ಇವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ನಾಡಗೀತೆಯೊಂದಿಗೆ ಕಾರ್ಯಕ್ರಮವನ್ನು ಪ್ರಾರಂಭ ಮಾಡಲಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಮತ್ತೋರ್ವ ಜಿಲ್ಲಾ ಕಾರ್ಯದರ್ಶಿಗಳಾದ ಶ್ರೀ ಎಸ್ ಎಸ್ ಹಲವಾಯಿ ಇವರು ನಡೆಸಿಕೊಟ್ಟರು. ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳಾದ ಶ್ರೀ ವೀ.ಮ ಅಂಗಡಿ ಇವರು ವಂದನಾರ್ಪಣೆಯನ್ನು ಸಲ್ಲಿಸಿದರು.ಡಾ//ಭಾರತಿ ಮಠದ ಇವರು ಅತಿಥಿಗಳ ಪರಿಚಯ ಭಾಷಣವನ್ನು ಮಾಡಿದರು.

ಬೆಳಗಾವಿ ಜಿಲ್ಲೆಯ ಮಹಿಳಾ ಲಿಂಗಾಯತ ಸಮಾಜದ ಸಂಸ್ಥಾಪಕರಾದ ಶ್ರೀಮತಿ ಶೈಲಜಾ ಬಿಂಗೆ, ಬೆಳಗಾವಿ ಜಿಲ್ಲೆಯ ಹಿರಿಯ ಮಹಿಳಾ ಲೇಖಕಿಂಯಾದ ಶ್ರೀಮತಿ ಜ್ಯೋತಿ ಬದಾಮಿ, ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷರಾದ ಶ್ರೀಮತಿ ಜಯಶೀಲಾ ಬ್ಯಾಕೋಡ, ಶ್ರೀಮತಿ ಗೀತಾ ಶೆಟ್ಟರ್, ರಮೇಶ್ ಮಗದುಮ್ಮ, ಸುರೇಶ್, ನಿತಿನ್ ಮೆಣಸಿನಕಾಯಿ ಮುಂತಾದ ಅನೇಕ ಸಾಹಿತ್ಯಾಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಕುಡುಕನ ರಂಪಾಟಕ್ಕೆ ಹೈರಾಣಾದ ಪೊಲೀಸರು



ತುಮಕೂರು: ಮದ್ಯದ ನಶೆಯಲ್ಲಿ ಅರೆನಗ್ನನಾಗಿ ಬಂದ ಯುವಕನೊಬ್ಬ ತಾಲೂಕು ಕಚೇರಿಯಲ್ಲಿ ಅವಾಂತರವನ್ನೇ ಸೃಷ್ಟಿಸಿದ್ದ. ಕುಡಿತದ ಮತ್ತಿನಲ್ಲಿದ್ದ ಯುವಕ ಸಾರ್ವಜನಿಕರ ಎದುರೇ ಬಟ್ಟೆ ಬಿಚ್ಚಿ ಪೊಲೀಸರಿಗೆ ತೊಡೆ ತಟ್ಟಿ ಆವಾಜ್ ಹಾಕಿರುವ ಘಟನೆ ತುರುವೇಕೆರೆ ತಾಲೂಕು ಕಚೇರಿಯಲ್ಲಿ ನಡೆದಿದೆ.

ಈ ಕುಡುಕನ ಹುಚ್ಚಾಟಕ್ಕೆ ಪೊಲೀಸರೇ ಹೈರಾಣಾಗಿದ್ದಾರೆ. ತುರುವೇಕೆರೆ ಪಟ್ಟಣದ ವಿನೋಭಾ ನಗರ ನಿವಾಸಿ ರವಿ ಎಂಬಾತ ರಂಪಾಟ ನಡೆಸಿದವನು. ಕೌಟುಂಬಿಕ ಸಮಸ್ಯೆಗೆ ಮನನೊಂದ ರವಿ ಕಂಠಪೂರ್ತಿ ಕುಡಿದು ಬಂದಿದ್ದ. ಈ ವೇಳೆ ಬಟ್ಟೆ ಹರಿದುಹಾಕಿಕೊಂಡು ಪೊಲೀಸರ ಮುಂದೆಯೇ ಪತ್ನಿ ಹಾಗೂ ತಾಯಿಯ ಮೇಲೆ ಹಲ್ಲೆಗೆ ಯತ್ನಿಸಿದ್ದಾನೆ.

ಮೊದಮೊದಲು ಅಲ್ಲಿದ್ದ ಸಾರ್ವಜನಿಕರು ರವಿಯನ್ನು ಸಮಾಧಾನಪಡಿಸಲು ಮುಂದಾಗಿದ್ದಾರೆ. ಆದರೆ ರವಿ ಇದ್ಯಾವುದಕ್ಕೂ ಕ್ಯಾರೆ ಎನ್ನದೇ ಸಿಕ್ಕ ಸಿಕ್ಕವರಿಗೆ ಬೈಯುತ್ತಾ, ಪತ್ನಿ ಹಾಗೂ ತಾಯಿಗೆ ಅವಾಚ್ಯ ಶಬ್ಧಗಳಿಂದ ನಿಂದಿಸಿದ್ದಾನೆ. ಎಷ್ಟೇ ತಿಳಿ ಹೇಳಿದರೂ ಕೇಳದೇ ಇದ್ದಾಗ ಈ ವಿಷಯವನ್ನು ಪೊಲೀಸರಿಗೆ ತಿಳಿಸಿದ್ದಾರೆ.

ಸ್ಥಳಕ್ಕಾಗಮಿಸಿದ ಪೊಲೀಸರು ರವಿಯನ್ನೂ ತಾಲೂಕು ಕಚೇರಿಯಿಂದ ಹೊರಕಳಿಸಲು ಮುಂದಾಗಿದ್ದಾರೆ. ಆದರೆ ಆತ ಹೊರ ಹೋಗದೇ ಮತ್ತಷ್ಟು ಸಿಟ್ಟಾಗಿದ್ದಾನೆ. ತಾನು ಧರಿಸಿದ್ದ ಪ್ಯಾಂಟ್, ಶರ್ಟ್ ಬಿಚ್ಚಿ, ಹೊಡೆಯಲು ಬಂದ ಪೊಲೀಸರಿಗೆ ತೊಡೆ ತಟ್ಟಿ ಅವಾಜ್ ಹಾಕಿದ್ದಾನೆ. ರವಿಯ ರಂಪಾಟಕ್ಕೆ ಬೇಸತ್ತ ಪೊಲೀಸರು ಕೂಡಲೇ ವಶಕ್ಕೆ ಪಡೆದಿದ್ದಾರೆ. ರವಿಯ ಈ ಹುಚ್ಚಾಟಕ್ಕೆ ಸಾರ್ವಜನಿಕರು ಕೆಲ ಕಾಲ ಆತಂಕಕ್ಕೆ ಒಳಗಾಗಿದ್ದರು. ಪೊಲೀಸರು ಪರಿಸ್ಥಿತಿಯನ್ನು ತಿಳಿಗೊಳಿಸಿದರು. ತುರುವೇಕೆರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಕೆಎಲ್ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ವತಿಯಿಂದಪಲ್ಸ್ ಪೋಲಿಯೋ ಜಾಗೃತಿ ಜಾಥಾ ಕಾರ್ಯಕ್ರಮ

ಬೆಳಗಾವಿ: ಮಕ್ಕಳ ಸರ್ವತೋಮುಖ ಅಭಿವೃದಿಯೇ ದೇಶದ ಭವಿಷ್ಯ ಎಂದು ರೋಟರಿ ಕ್ಲಬ್ಆಫ್ ಬೆಳಗಾವಿ ನ ಅಧ್ಯಕ್ಷ ಶ್ರೀ ಜೈದೀಪ ಸಿದ್ದಣ್ಣವರ ಅವರು ಮಾತನಾಡುತ್ತಿದ್ದರು. ಅವರು ಶುಕ್ರವಾರ ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ, ರೋಟರಿ ಕ್ಲಬ್ಆಫ್ ಬೆಳಗಾವಿ, ಕೆ ಎಲ್ ಇ ಹೋಮಿಯೋಪಥಿಕ್ ಕಾಲೇಜ ಹಾಗೂ ಕೆ ಎಲ್ ಇ ನರ್ಸಿಂಗ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಹಮ್ಮಿಕೋಳ್ಳಲಾಗಿದ್ದ, ಪಲ್ಸ್ ಪೋಲಿಯೋ ಜಾಗೃತಿ ಜಾಥಾಕಾರ್ಯ ಕ್ರಮವನ್ನು ಉದ್ಘಾಟಿಸುತ್ತ ಮಾತನಾಡುತ್ತಿದ್ದರು. ಈ ಜಾಥಾವು ವಡಗಾವಿಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಪ್ರಾರಂಬಗೊಂಡು ಕೆ.ಎಲ್.ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಆವರಣದವರೆಗೆ ಹಮ್ಮಿಕ್ಕೊಳ್ಳಲಾಗಿತ್ತು. ಪೋಲಿಯೋ ರೋಗವೂ ಮಕ್ಕಳ ಬಾಲ್ಯ ಹಾಗೂ ಭವಿಷ್ಯದ ಮೇಲೆ ಅಘಾದವಾದ ಪರಿಣಾಮ ಬೀರುತ್ತದೆ. ಆದ್ದರಿಂದ ಮಕ್ಕಳ ಭವಿಷ್ಯದಲ್ಲಿ ಕಷ್ಟಕ್ಕೊಳಗಾಗದಂತೆ ಮಾಡಲು ತಮ್ಮ ಎಲ್ಲಾ 5 ವರ್ಷದೊಳಗಿನ ಮಕ್ಕಳನ್ನು ಕರೆದು ಕೊಂಡು ಬಂದು, ಬರುವರವಿವಾರ 3ನೇ ಮಾರ್ಚ 2024 ರಂದು ತಮ್ಮ ಸಮೀಪದ ಪಲ್ಸ ಪೋಲಿಯೋ ಲಸಿಕಾಕೇಂದ್ರಕ್ಕೆ ಭೇಟಿ ನೀಡಿ ಲಸಿಕೆ ಕೊಡಿಸಿರಿ



ಎಂದುಕರೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ 'ಡಾ.ಎಸ್ ಸಿ ಧಾರವಾಡಅವರು ಪೋಲಿಯೋರೋಗವು ಇಂದು ನಮ್ಮ ಭಾರತದಲ್ಲಿ ಪೋಲಿಯೋ ರೋಗವು ನಿರ್ಮೂಲನೆ ಆಗಿದೆ, ಆದರೆ ನಮ್ಮಅಕ್ಕಪಕ್ಕದ ದೇಶಗಳಾದ ಪಾಕಿಸ್ತಾನ, ಅಪಘಾನಿಸ್ತಾನ ದೇಶಗಳಲ್ಲಿ ಪೋಲಿಯೋ ಪ್ರಕರಣಗಳು ದಾಖಲಾಗುತ್ತಿರುವದರಿಂದಇದು ನಮ್ಮದೇಶದ ಮಕ್ಕಳಿಗೆ ಭಾದಿಸದಂತೆ ಮಾಡಲುಇಂದೇ ನಾವು ನಮ್ಮಎಲ್ಲ 5 ವರ್ಷದೊಳಗಿನ ಮಕ್ಕಳಿಗೆ ಪಲ್ಸಪೋಲಿಯೋ ಲಸಿಕೆಯನ್ನು ಹಾಕಿಸಲೇಬೇಕು ಎಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಹೆಸರಾಂತ ಸ್ತ್ರೀರೋಗ ಹಾಗೂ ಪ್ರಸೂತಿತಜ್ಞ ಹಾಗೂ ರೋಟರಿಕ್ಲಬ್ ನ ಮಾಜಿ ಅಧ್ಯಕ್ಷಡಾ. ಸತೀಶ ಧಾಮಣಕರ, ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದ ಹೆಸರಾಂತ ವೈದ್ಯರಾದ ಡಾ.ಬಸವರಾಜ ಕುಡಸೋಮಣ್ಣವರ, ಡಾ.ಸೌಮ್ಯಾ ವೇರ್ಣೇಕರ, ಡಾ ಸಂತೋಷಕುಮಾರ ಕರಮಸಿ ಹಾಗೂ ಡಾ.ಯೋಗೇಶ ರಾವಳ ಸೇರಿದಂತೆ ಯು–ಎಸ್ಎಮ್ ಕೆ ಎಲ್ ಇ ಯ45 ವೈದ್ಯ ವಿದ್ಯಾರ್ಥಿಗಳು,ಕೆ ಎಲ್ ಇ ಸೆಂಟಿನರಿಇನ್ಸ್ಟಿಟ್ಯುಟಆಫ ನರ್ಸಿಂಗ ಸೈನ್ಸ್ ನ ಪ್ರಾಂಶುಪಾಲ ಶ್ರೀ ವಿಕ್ರಾಂತ ನೇಸರಿ ಹಾಗೂ ಅವರ 65ಕ್ಕೂ ಅಧಿಕ ವಿದ್ಯಾರ್ಥಿಗಳು.ಕೆ ಎಲ್ ಇ ಹೋಮಿಯೊಪಥೀಕ ಕಾಲೇಜಿನ ಪ್ರಾಂಶುಪಾಲರಾದಡಾ. ಎಮ್ ಎ ಉಡ–'ಚನಕರ ಅವರು ಮತ್ತುಅವರ 50 ಕ್ಕೂ ಅಧಿಕ ವಿದ್ಯಾರ್ಥಿಗಳು ಒಟ್ಟು 150ಕ್ಕೂ ಅಧಿಕಜನರು ಜಾಥಾದಲ್ಲಿ ಭಾಗವಹಿಸಿದ್ದರು.

# ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

## ಕುಡಿಯುವ ನೀರು; ಮೇವು ಸಮರ್ಪಕ ಪೂರೈಕೆಗೆ ಉಸ್ತುವಾರಿ ಸಚಿವರ ಸೂಚನೆ; ಕ್ರೀಡಾಶಾಲೆ ನಿರ್ಮಾಣ; ಪ್ರಸ್ತಾವನೆ ಸಲ್ಲಿಸಲು ಸೂಚನೆ



ಬೆಳಗಾವಿ: ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ರೀತಿಯ ಕೊರತೆಯಾಗದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಸುವರ್ಣ ವಿಧಾನಸೌಧದಲ್ಲಿ ಶುಕ್ರವಾರ(ಮಾ.1) ನಡೆದ 2023–24 ಸಾಲಿನ ಮೂರನೇ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ವಿಕಲಚೇತನರಿಗೆ ತ್ರಿಚಕ್ರ ವಾಹನಗಳನ್ನು ಒಮ್ಮೆಲೆ ವಿತರಿಸಲು ಕ್ರಮ ಕೈಗೊಳ್ಳುವುದು ಸೂಕ್ತ. ಆದ್ದರಿಂದ ಬೆಳಗಾವಿ ಸೇರಿದಂತೆ ಪ್ರತಿವರ್ಷ ಕನಿಷ್ಠ ಎರಡು ಜಿಲ್ಲೆಗಳ ವಿಕಲಚೇತನರಿಗೆ ಆದ್ಯತೆ ಮೇರೆಗೆ ಒಂದೆರಡು ವರ್ಷಗಳಲ್ಲಿ ವಾಹನ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಕುಡಚಿ ವಿಧಾನಸಭಾ ಕ್ಷೇತ್ರದಲ್ಲಿ ಒಮ್ಮೆ ಮಂಜೂರಾಗಿರುವ ಪಾಲಿಹೌಸ್ ಗಳನ್ನೇ ಹೊಸದಾಗಿ ಮಂಜೂರಾದ ಫಲಾನುಭವಿಗಳಿಗೆ ಅಕ್ರಮವಾಗಿ ಹಸ್ತಾಂತರಿಸಿದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥ ಅಧಿಕಾ–ರಿಗಳು ಹಾಗೂ ಖಾಸಗಿ ವ್ಯಕ್ತಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಸಚಿವರು ಸೂಚನೆ ನೀಡಿದರು.

**ತಾಯಿಮಕ್ಕಳ ಆಸ್ಪತ್ರೆ ಕಾರ್ಯಾರಂಭಿಸಲು ಸೂಚನೆ:**

ಈಗಾಗಲೇ ಕಟ್ಟಡ ಪೂರ್ಣಗೊಂಡಿರುವ ತಾಯಿಮಕ್ಕಳ ಆಸ್ಪತ್ರೆಗಳು ಐದಾರು ವರ್ಷವಾದರೂ ಕಾರ್ಯಾರಂಭಿಸದಿರುವುದಿಲ್ಲ. ಮುಂದಿನ ಕೆಡಿಪಿ ಸಭೆಗಿಂತ ಮುಂಚೆ ಇಂತಹ ಆಸ್ಪತ್ರೆಗಳು ಕಾರ್ಯಾರಂಭಿಸಬೇಕು ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಪ್ರತಿವರ್ಷ ಕನಿಷ್ಠ ಎರಡು ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ಹೊಂದುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಯತ್ನಿಸಬೇಕು. ಹೀಗೆ ಮಾಡಿದಲ್ಲಿ ನಾಲ್ಕೈದು ವರ್ಷಗಳಲ್ಲಿ ಜಿಲ್ಲೆಯಾದ್ಯಂತ ಎಲ್ಲೆಡೆ ಸ್ವಂತ ಅಂಗನವಾಡಿ ಕಟ್ಟಡಗಳನ್ನು ಹೊಂದಿದಂತಾಗುತ್ತದೆ ಎಂದು ಹೇಳಿದರು.

ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಸ್ವಂತ ಟ್ಯಾಂಕರ್ ಖರೀದಿಸುವಂತೆ ಈಗಾಗಲೇ ಸೂಚನೆ ನೀಡಲಾಗಿತ್ತು. ಇದುವರೆಗೆ 280 ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಟ್ಯಾಂಕರ್ ಖರೀದಿಸಲಾಗಿದ್ದು, ಉಳಿದ ಪಂಚಾಯಿತಿಗಳಲ್ಲಿ ಆದಷ್ಟು ಬೇಗನೇ ಟ್ಯಾಂಕರ್ ಖರೀದಿಸಬೇಕು ಎಂದು ಸಚಿವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸ್ವಂತ ಟ್ಯಾಂಕರ್ ಹೊಂದಿದ್ದರೆ ಬೇಸಿಗೆಯಲ್ಲಿ ತುರ್ತಾಗಿ ಕುಡಿಯುವ ನೀರು ಪೂರೈಕೆಗೆ ಅನುಕೂಲವಾಗಲಿದೆ. ಹೊಸ ಕೊಳವೆಬಾವಿಗಿಂತ ನೀರಿನ ಸಮಸ್ಯೆ ಇರುವ ಕಡೆಗಳಲ್ಲಿ ಟ್ಯಾಂಕರ್ ಮೂಲಕ ಸಮರ್ಪಕವಾಗಿ ನೀರು ಪೂರೈಸಬಹುದು ಎಂದು ಹೇಳಿದರು.

ಕೊಳಗೇರಿ ಅಭಿವೃದ್ಧಿ ಮಂಡಳಿಯ ವತಿಯಿಂದ ವಸತಿ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿರುವ ವಸತಿ ಯೋಜನೆಗಳಿಗೆ ಸಲ್ಲಿಸುವ ಎಲ್ಲ–ರಿಗೂ ಸೌಲಭ್ಯ ಕಲ್ಪಿಸಬೇಕು ಎಂದು ಸಚಿವರು ತಿಳಿಸಿದರು.

ವಸತಿ ಯೋಜನೆ ಅನುಷ್ಠಾನ ವಿಳಂಬವಾಗುತ್ತಿದೆ ಎಂದು ಶಾಸಕ ರಾಜು ಸೇಠ್ ಹಾಗೂ ಮಹಾಂತೇಶ ಕೌಜಲಗಿ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ನೇಮಕಾತಿ ಪ್ರಕ್ರಿಯೆ ಮಕ್ತಾಯಗೊಂಡಿರುವುದರಿಂದ ಆಕ್ಷೇಪಣೆ ಪರಿಶೀಲಿಸಿ ಕೂಡಲೇ ನೇಮಕಾತಿ ಆದೇಶ ಹೊರಡಿಸಬೇಕು ಎಂದು ತಿಳಿಸಿದರು.

**ಕ್ರೀಡಾಶಾಲೆ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲು ಸೂಚನೆ:**

ಜಿಲ್ಲೆಯಲ್ಲಿ ಅತೀ ಹೆಚ್ಚು ಜನಸಂಖ್ಯೆ ಇರುವುದರಿಂದ ಚಿಕ್ಕೋಡಿ, ಗೋಕಾಕ ಮತ್ತಿತರ ಕಡೆಗಳಲ್ಲಿಯೂ ಕ್ರೀಡಾಶಾಲೆಗಳ ನಿರ್ಮಾಣ–ಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು. ಜಿಲ್ಲಾ ಕ್ರೀಡಾಂಗಣ ನಿರ್ಮಾಣಕ್ಕೆ ಜಮೀನು ಸಮತಟ್ಟು ಮಾಡಲು ಟೆಂಡರ್ ಕರೆಯಲಾಗಿದೆ.

ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ಪರೀಕ್ಷೆ ಇರುವುದ–ರಿಂದ ಹೆಚ್ಚುವರಿ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ಈ ಬಗ್ಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಮನ್ವಯತೆ ಸಾಧಿಸಬೇಕು ಎಂದರು.

ಬೆಳಗಾವಿ ವಿಭಾಗಕ್ಕೆ 32 ಹೊಸ ಬಸ್ ಗಳನ್ನು ಈಗಾಗಲೇ ಒದಗಿಸಲಾಗಿದೆ. ಇನ್ನಷ್ಟು ಹೆಚ್ಚುವರಿ ಬಸ್ ಗಳನ್ನು ಪಡೆದುಕೊಳ್ಳಬೇಕು ಎಂದರು.

**ಗ್ಯಾರಂಟಿ ಯೋಜನೆ ಜನರಿಗೆ ತಲುಪಿಸಿ:**

ಸರಕಾರದ ನಿರ್ದೇಶನದಂತೆ ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಗ್ಯಾರಂಟಿ ಸಮಾವೇಶಗಳನ್ನು ನಡೆಸಬೇಕು. ಯೋಜನೆಯ ಪ್ರಯೋಜನವನ್ನು ಪಡೆದುಕೊಳ್ಳುವ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಜಿಲ್ಲೆಯಲ್ಲಿ ಇದುವರೆಗೆ 1177 ಲಕ್ಷ ರೂಪಾಯಿ ಜಮೆಯಾಗಿರುತ್ತದೆ ಎಂದು ಅಧಿಕಾರಿಗಳು ಸಭೆಯಲ್ಲಿ ವಿವರಿಸಿದರು.

ಗೃಹಲಕ್ಷ್ಮೀ ಸೇರಿದಂತೆ ಎಲ್ಲ ಗ್ಯಾರಂಟಿ ಯೋಜನೆಗಳ ಪ್ರಯೋಜನವನ್ನು ನೋಂದಾಯಿತ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸಬೇಕು ಎಂದು ಸಚಿವರು ತಿಳಿಸಿದರು.

ಮಳೆಗಾಲ ಆರಂಭಗೊಳ್ಳುವುದಕ್ಕಿಂತ ಮುಂಚೆಯೇ ಕೆನಾಲ್‌ಗಳ ಹೂಳೆತ್ತುವ ಮೂಲಕ ಸ್ವಚ್ಛಗೊಳಿಸಬೇಕು ಎಂದು ರಾಜ್ಯಸಭಾ ಸದಸ್ಯರಾದ ಈರಣ್ಣ ಕಡಾಡಿ ಹೇಳಿದರು.

ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಜಿಲ್ಲೆಯ ಕೆಲವೆಡೆ ಹೊರ ರಾಜ್ಯದವರು ಮೇವು ಖರೀದಿಸುತ್ತಿರುವುದು ಕಂಡುಬಂದಿದೆ. ಆದ್ದರಿಂದ ಮುಂಬರುವ ದಿನಗಳಲ್ಲಿ ಕೊರತೆ ಉಂಟಾಗದಂತೆ ಮುಂಚಿತವಾಗಿಯೇ ಮೇವು ಖರೀದಿಸಿ ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಟ್ಟಡ ಕಾಮಗಾರಿ ಪೂರ್ಣಗೊಂಡಿರುವ ತಾಯಿಮಕ್ಕಳ ಆಸ್ಪತ್ರೆಗಳನ್ನು ಸಣ್ಣಪುಟ್ಟ ಕಾರಣಗಳ ನೆಪವೊಡ್ಡಿ ಅನೇಕ ವರ್ಷಗಳಿಂದ ಆರಂಭಿಸಿದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು.

ಅತಿವೃಷ್ಟಿಯಿಂದ ಮನೆಗಳನ್ನು ಕಳೆದುಕೊಂಡಿರುವ ಕುಟುಂಬಗಳಿಗೆ ಚಾಲ್ತಿಯಲ್ಲಿರುವ ವಿವಿಧ ಯೋಜನೆಗಳಡಿ ವಸತಿ ಕಲ್ಪಿಸುವಂತೆ ಸರಕಾರದಿಂದ ನಿರ್ದೇಶನ ಬಂದಿರುತ್ತದೆ. ಆ ಪ್ರಕಾರ ವಸತಿ ಸೌಲಭ್ಯ ಒದಗಿಸಲಾಗುವುದು ಎಂದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಪ್ರಸಕ್ತ ವರ್ಷ ಅತಿವೃಷ್ಟಿಯಿಂದ ಮನೆ ಕಳೆದುಕೊಂಡಿರುವ 262 ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 26 ವಾರಗಳಿಗೆ ಸಾಕಾಗುವಷ್ಟು ಮೇವು ಲಭ್ಯವಿದೆ. ಇದಲ್ಲದೇ ಅಗತ್ಯ ಮೇವು ಖರೀದಿಗೆ ಟೆಂಡರ್ ಕೂಡ ಕರೆಯಲಾಗಿದೆ. ಮೇವು ಖರೀದಿಗೆ ಸಾಕಷ್ಟು ದುಡ್ಡು ಕೂಡ ಲಭ್ಯವಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

ಹೊರಗುತ್ತಿಗೆ ನೌಕರರ ನೇಮಕಾತಿ ಪ್ರಕ್ರಿಯೆ ವಿಳಂಬವಾಗುವುದನ್ನು ತಪ್ಪಿಸಲು ಎಲ್ಲ ಇಲಾಖೆಯವರು ಎರಡು ತಿಂಗಳು ಮುಂಚಿತವಾಗಿಯೇ ಪ್ರಕ್ರಿಯೆ ಆರಂಭಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ 3.72 ಲಕ್ಷ ರೈತರ ಪೈಕಿ 3.40 ಲಕ್ಷ ರೈತರಿಗೆ ಇತ್ತೀಚೆಗೆ ಬರದಿಂದ ಉಂಟಾಗಿರುವ ಬೆಳೆಹಾನಿ ಪರಿಹಾರವು ಜಮೆ ಮಾಡಲಾಗಿರುತ್ತದೆ. ಫ್ರುಟ್ಸ್ ತಂತ್ರಾಂಶದಲ್ಲಿ ನೋಂದಣಿ ಹಾಗೂ ಖಾತೆ ವಿವರಗಳ ಹೊಂದಾಣಿಕೆಯಾಗದಿರುವುದರಿಂದ ಇನ್ನೂ 21 ಸಾವಿರ ರೈತರಿಗೆ ಪರಿಹಾರ ನೀಡುವುದು ಬಾಕಿ ಇರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಹತ್ತು ಗ್ರಾಮ ಪಂಚಾಯಿತಿಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಜಿಲ್ಲೆಯ ಹದಿನೈದು ತಹಶೀಲ್ದಾರರ ಖಾತೆಯಲ್ಲಿ ತಲಾ ಒಂದು ಕೋಟಿ ರೂಪಾಯಿಯಂತೆ ಅನುದಾನ ಲಭ್ಯವಿರುತ್ತದೆ. ಆದ್ದರಿಂದ ಕುಡಿಯುವ ನೀರು ಪೂರೈಕೆ ಹಾಗೂ ಬರ ನಿರ್ವಹಣೆಗೆ ಹಣಕಾಸಿನ ತೊಂದರೆಯಿಲ್ಲ ಎಂದು ಹೇಳಿದರು.

ಬೆಳಗಾವಿ–ಧಾರವಾಡ ರೈಲುಮಾರ್ಗ ಕಾಮಗಾರಿ:

ಭೂಸ್ವಾಧೀನ ಹಾಗೂ ಹೆಚ್ಚಿನ ಪರಿಹಾರ ನೀಡುವುದಕ್ಕೆ ಸಂಬಂಧಿಸಿದಂತೆ ರೈತರ ಪ್ರತಿಭಟನೆಯಿಂದಾಗಿ ಬೆಳಗಾವಿ–ಧಾರವಾಡ ರೈಲುಮಾರ್ಗ; ಎಸ್.ಟಿ.ಪಿ. ಸೇರಿದಂತೆ ಅನೇಕ ಪ್ರಮುಖ ಯೋಜನೆಗಳು ವಿಳಂಬಗೊಳ್ಳುತ್ತಿವೆ. ಆದ್ದರಿಂದ ಈ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಸೂಕ್ತ ಪರಿಹಾರ ಕಂಡುಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಈಗಾಗಲೇ ಎಸ್.ಟಿ.ಪಿ. ಕಾಮಗಾರಿಗಳು ಮುಕ್ತಾಯದ ಹಂತದಲ್ಲಿರುವುದರಿಂದ ಯೋಜನೆ ಅನುಷ್ಠಾನಗೊಳಿಸುವುದು ಅನಿವಾರ್ಯ ಎಂದು ಸಚಿವರು ಅಭಿಪ್ರಾಯಪಟ್ಟರು.

ತೇಗೂರದಿಂದ ದೇಸೂರವರೆಗೆ ಮಾರ್ಗ ನಿರ್ಮಾಣವಾಗುತ್ತಿದೆ. ದೇಸೂರ–ಕಣವಿನಕೊಪ್ಪ ನಡುವೆ 150 ಎಕರೆ ನೀರಾವರಿ ಭೂಮಿ ಇರುವುದರಿಂದ ಮಾರ್ಗ ಬದಲಾಯಿಸುವಂತೆ ರೈತರು ಕೋರಿರುತ್ತಾರೆ.

ಮಾರ್ಗ ಬದಲಾವಣೆ ಸಾಧ್ಯವಿಲ್ಲ ಎಂದು ರೈಲ್ವೆ ಇಲಾಖೆ ಸ್ಪಷ್ಟಪಡಿಸಿರುವುದರಿಂದ ರೈತ–ರಿಗೆ ಹೆಚ್ಚುವರಿ ಪರಿಹಾರ ನೀಡುವ ಕುರಿತು ಹಲವಾರು ಬಾರಿ ಸಭೆ ನಿಗದಿಪಡಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಸಾಧ್ಯವಾಗಿಲ್ಲ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ವಿವ–ರಿಸಿದರು.

608 ರ ಪೈಕಿ 444 ರಲ್ಲಿ ಕೆಲಸ ಆರಂಭಗೊಂಡಿದ್ದು, ಕೇವಲ 150 ಎಕರೆ ಜಮೀನು ಸ್ವಾಧೀನದ ಬಗ್ಗೆ ಮಾತ್ರ ಸಮಸ್ಯೆ ಉದ್ಭವಿಸಿದೆ ಎಂದು ಭೂಸ್ವಾಧೀನಕ್ಕೆ ಸಂಬಂಧಿಸಿದ ಅಧಿಕಾ–ರಿಗಳು ತಿಳಿಸಿದರು.

ಈಗಾಗಲೇ ಕಾಮಗಾರಿ ಆರಂಭಗೊಂಡಿರುವುದರಿಂದ ಆದಷ್ಟು ಬೇಗನೇ ಇನ್ನುಳಿದ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಸಂಸದೆ ಮಂಗಲ ಅಂಗಡಿ ತಿಳಿಸಿದರು.

ಬೆಳಗಾವಿ–ಧಾರವಾಡ ರೈಲು ಯೋಜನೆ ಮಹತ್ವದ ಯೋಜನೆಯಾಗಿದೆ. ಆದ–ರಿಂದ ಸಮಸ್ಯೆ ಇರುವ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸದಿದ್ದರೆ ಯೋಜನೆ ವಿಳಂಬವಾಗುತ್ತದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.

ಜಿಲ್ಲೆಯಲ್ಲಿ ಬಹುತೇಕ ಅಂಬೇಡ್ಕರ್ ಭವನಗಳ ದುರಸ್ತಿ ಕಾಮಗಾರಿಗಳನ್ನು ಪ್ರಸಕ್ತ ಸಾಲಿನ ಕ್ರಿಯಾಯೋಜನೆಯಲ್ಲಿ ಸೇರ್ಪಡೆ ಮಾಡಿಕೊಳ್ಳಲಾಗಿದೆ. ಉಳಿದ ಭವನಗಳನ್ನು ಮುಂದಿನ ಕ್ರಿಯಾಯೋಜನೆಯಲ್ಲಿ ಸೇರ್ಪಡೆ ಮಾಡಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ತಿಳಿಸಿದರು.

280 ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಸ್ವಂತ ಟ್ಯಾಂಕರ್ ಖರೀದಿಸಲಾಗಿದ್ದು, ಉಳಿದ ಗ್ರಾಮ ಪಂಚಾಯಿತಿಗಳಲ್ಲಿ ಒಂದು ತಿಂಗಳಿನಲ್ಲಿ ಟ್ಯಾಂಕರ್ ಖರೀದಿಸಲಾಗುವುದು ಎಂದು ವಿವ–ರಿಸಿದರು.

ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೇಸಿಗೆ ಸಂದರ್ಭದಲ್ಲಿ ಕುಡಿಯುವ ಸಮಸ್ಯೆ ನಿತಗವಹಣೆಗೆ ಸೂಕ್ತ ಸಿದ್ಧತೆ ಮಾಡಿಕೊಳ್ಳಲಾಗಿದೆ. ಖಾಸಗಿ ಬಾವಿಗಳನ್ನು ಗುರುತಿಸಲಾಗಿದ್ದು, ಆಯವ್ಯಯದಲ್ಲೂ ಅನುದಾನ ತೆಗೆದಿರಿಸಲಾಗಿದೆ. ಅಗತ್ಯವಿರುವ ಕಡೆಗಳಲ್ಲಿ ಟ್ಯಾಂಕರ್ ಗಳನ್ನು ಕೂಡ ಖರೀದಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರಾದ ಪಿಎನ್.ಲೋಕೇಶ್ ವಿವ–ರಿಸಿದರು.

ವಿಧಾನ ಪರಿಷತ್ತಿನ ಸದಸ್ಯರಾದ ಎಂ.ನಾಗರಾಜ್ ಯಾದವ ಅವರು, ಸಭೆಯಲ್ಲಿ ಮಾತನಾಡಿ, ಪ್ರಸಕ್ತ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗದಿರುವ ಅಂಬೇಡ್ಕರ್ ಭವನಗಳ ದುರಸ್ತಿಯನ್ನು ಅಧಿಕಾರಿಗಳು ಖಚಿತಪಡಿಸಬೇಕು ಅದೇ ರೀತಿ ಸಾಕಷ್ಟು ಮೇವು ದಾಸ್ತಾನು ಕೂಡ ಲಭ್ಯವಿಟ್ಟುಕೊಳ್ಳಬೇಕು ಎಂದು ಹೇಳಿದರು.

ಸಂಸದೆ ಮಂಗಲ ಅಂಗಡಿ, ರಾಯಬಾಗ ಶಾಸಕರಾದ ದುರ್ಯೋಧನ ಐಹೊಳೆ, ಬೆಳಗಾವಿ(ಉತ್ತರ) ಶಾಸಕ ಆಸಿಫ್(ರಾಜು) ಸೇಠ್, ಖಾನಾಪುರ ಶಾಸಕ ವಿಠ್ಠಲ ಹಲಗೇಕರ್, ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ, ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯಲ್ಲಿ ಅನುಕಂಪ ಆಧಾರಿತವಾಗಿ ನೇಮಕಗೊಂಡ ನೌಕರರಿಗೆ ಜಿಲ್ಲಾ ಉಸ್ತುವಾರಿ ಸಚಿವರು ನೇಮಕಾತಿ ಆದೇಶಪತ್ರವನ್ನು ವಿತರಿಸಿದರು.

## ಅನುಕಂಪ ಆಧಾರಿತ ನೇಮಕ: ಆದೇಶ ಪತ್ರ ವಿತರಿಸಿದ ಸಚಿವ ಜಾರಕಿಹೊಳಿ



ಬೆಳಗಾವಿ: ಗ್ರಾಮ ಪಂಚಾಯಿತಿಯಲ್ಲಿ ಅನುಕಂಪ ಆಧಾರಿತವಾಗಿ ನೇಮಕಗೊಂಡ ನೌಕರರಿಗೆ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಅವರು ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿದರು.

ಸುವರ್ಣ ವಿಧಾನ ಸೌಧದಲ್ಲಿ ಶುಕ್ರವಾರ (ಮಾ.01) ಜರುಗಿದ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯ ನಂತರ ಗ್ರಾಮ ಪಂಚಾಯತಿಯಲ್ಲಿ ಸೇವೆಯಲ್ಲಿರುವಾಗ ಮೃತಪಟ್ಟ ಸಿಬ್ಬಂದಿಳ ಅವಲಂಬಿತ ಕುಟುಂಬದ ಒಟ್ಟು 37 ಸಿಬ್ಬಂದಿಗಳಿಗೆ ಕರವ ಸೂಲಿಗಾರ, ಕ್ಲರ್ಕ, ಕ್ಲರ್ಕ ಕಂ. ಡಾಟಾ ಎಂಟ್ರಿ ಆಪರೇಟರ್, ವಾಟರಮೆನ್, ಸಿಪಾಯಿ, ಸ್ವಚ್ಛತಾಗಾರ ರವರ ಅವಲಂಬಿತ ಕುಟುಂಬಗಳಿಗೆ ಅನುಕಂಪ ಆಧಾರದ ಮೇಲೆ ನೇಮಕಾತಿ ಆದೇಶ ಪತ್ರವನ್ನು ಜಿಲ್ಲಾ ಉಸ್ತುವಾರಿ ಸಚಿವರು ವಿತರಿಸಿದರು.

ಈ ಸಂದರ್ಭದಲ್ಲಿ ರಾಯಬಾಗ ಶಾಸಕರಾದ ದುರ್ಯೋಧನ ಐಹೊಳೆ, ಬೆಳಗಾವಿ(ಉತ್ತರ) ಶಾಸಕ ಆಸಿಫ್(ರಾಜು) ಸೇಠ್, ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಖಾನಾಪುರ ಶಾಸಕ ವಿಠ್ಠಲ ಹಲಗೇಕರ್, ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ, ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ, ಜಿಲ್ಲಾಧಿಕಾ–ರಿಗಳಾದ ನಿತೇಶ್ ಪಾಟೀಲ, ಜಿಲ್ಲಾ ಪಂಚಾಯತ ಸಿ.ಇ.ಒ ರಾಹುಲ್ ಶಿಂಧೆ, ಜಿಲ್ಲಾ ಪಂಚಾಯತ ಅಧಿಕಾರಿಗಳಾದ ಉಪ ಕಾರ್ಯದರ್ಶಿಗಳು ಆಡಳಿತ ರೇಖಾ ಡೊಳ್ಳಿನವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳು ಅಭಿವೃದ್ಧಿ ಬಸವರಾಜ ಅಡವಿಮಠ, ಮುಖ್ಯ ಲೆಕ್ಕಾಧಿಕಾರಿಗಳಾದ ಪರಶುರಾಮ ದುಡಗುಂಟಿ, ಮುಖ್ಯ ಯೋಜನಾಧಿಕಾ–ರಿಗಳಾದ ಗಂಗಾಧರ ದಿವಟ–ರ್, ಸಂಬಂಧಪಟ್ಟ ಗ್ರಾಮ ಪಂಚಾಯತ ಅಧ್ಯಕ್ಷರು, ಪಂಚಾಯತ ಅಭಿವೃದ್ಧಿ ಅಧಿಕಾ–ರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಕಾನ್ಸ್‌ಟೇಬಲ್‌ಗೆ ಚೂರಿ ಇರಿತ: 6 ಆರೋಪಿಗಳ ಬಂಧನ



ಬೆಂಗಳೂರು: ಮೈಸೂರು–ಬೆಂಗಳೂರು ನಡುವೆ ಸಂಚರಿಸುತ್ತಿದ್ದ ಗೋಲ್ ಗುಂಬಜ್ ಎಕ್ಸ್ ಪ್ರೆಸ್ ರೈಲಿನಲ್ಲಿ ಪೊಲೀಸ್ ಕಾನ್ಸ ಟೇಬಲ್ ಮೇಲೆ ಹಲ್ಲೆ ನಡೆಸಿ ಚೂರಿ ಇರಿದ ಪ್ರಕರಣಕ್ಕೆ ಸಂಬಂಧಿಸಿದಂತೆ 6 ಆರೋಪಿಗಳನ್ನು ರೈಲ್ವೆ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಮೊಹಮ್ಮದ್ ಇರ್ಫಾನ್, ದರ್ಶನ್, ಫೈಸಲ್ ಖಾನ್, ಮೊಹಮ್ಮದ್ ಇಮ್ರಾನ್, ಮೋಯಿನ್ ಪಾಷಾ ಹಾಗೂ ಮುನಿರಾಜು ಎಂದು ಗುರುತಿಸಲಾಗಿದೆ.

ಗೋಲ್ ಗುಂಬಜ್ ರೈಲಿನಲ್ಲಿ ದರೋಡೆ ಹಾಗೂ ಕಳ್ಳತನ ಪ್ರಕರಣಗಳ ಬಗ್ಗೆ ದೂರು ಹಿನ್ನೆಲೆಯಲ್ಲಿ ಭದ್ರತೆಗಾಗಿ ಕಾನ್ಸ ಟೇಬಲ್ ಸತೀಶ್ ಚಂದ್ರ ಅವರನ್ನು ನೇಮಕ ಮಾಡಲಾಗಿತ್ತು. ರೈಲಿನಲ್ಲಿ ಪರಿಶೀಲನೆ ನಡೆಸುತ್ತಿದ್ದಾಗ ಎಸ್.5 ಬೋಗಿಯಲ್ಲಿ 6 ಯುವಕರ ಗುಂಪು ವಿಶ್ರಾಂತಿ ಕೊಠಡಿ ಬಳಿ ಧೂಮಪಾನ ಮಾಡುತ್ತಾ, ಪ್ರಯಾಣಿಕರಿಗೆ ಕೆಟ್ಟದಾಗಿ ಕಮೆಂಟ್ ಮಾಡುತ್ತಾ ಓಡಾಡುತ್ತಿದ್ದರು. ಇದ–ರಿಂದ ಪ್ರಯಾಣಿಕರು ಕಿರಿಕಿರಿ ಅನುಭವಿಸಿದ್ದರು. ಇದನ್ನು ಗಮನಿಸಿದ ಕಾನ್ಸ ಟೇಬಲ್ ಪ್ರಯಾಣಿಕ–ರಿಗೆ ತೊಂದರೆ ಕೊಡಬೇಡಿ ಎಂದು ಸೂಚಿಸಿದ್ದಾರೆ.

ಆದಾರೂ ಸುಮ್ಮನಾಗದ ಯುವಕರ ಗುಂಪು ಕಾನ್ಸ ಟೇಬಲ್ ಜೊತೆ ವಾಗ್ವಾದ ನಡೆಸಿದೆ. ಈ ವೇಳೆ ಕಾನ್ಸ ಟೇಬಲ್ ಆರೋಪಿಗಳನ್ನು ವಶಕ್ಕೆ ಪಡೆಯಲು ಮದ್ದೂರು ನಿಲ್ದಾಣದ ಪೊಲೀಸ್ ಸಿಬ್ಬಂದಿಗಳಿಗೆ ಸಂದೇಶ ರವಾನಿಸಿದ್ದಾರೆ. ಇನ್ನೇನು ನಿಲ್ದಾಣ ಸಮೀಪಿಸುತ್ತಿದೆ ಎನ್ನುವಷ್ಟರಲ್ಲಿ ಯುವಕರ ಗುಂಪು ಚೂರಿ ತೆಗೆದು ಕಾನ್ಸ ಟೇಬಲ್ ಬೆನ್ನಿಗೆ ಇರಿದಿದೆ. ಗಂಭೀರವಾಗಿ ಗಾಯಗೊಂಡು ರಕ್ತ ಬರುತ್ತಿದ್ದರೂ ಬಿಡದ ಕಾನ್ಸ ಟೇಬಲ್ ಇಬ್ಬರು ಯುವಕರನ್ನು ಪ್ರಯಾಣಿಕರ ಸಹಾಯದಿಂದ ಹಿಡಿದಿದ್ದಾರೆ. ಘಟನೆ ಬಳಿಕ ಇದೀಗ ಇನ್ನುಳಿದ ನಾಲ್ವರು ಆರೋಪಿಗಳನ್ನು ರೈಲ್ವೆ ಪೊಲೀಸರು ಬಂಧಿಸಿದ್ದಾರೆ.

## ಬೆಕ್ಕಿನಕೇರಿಯಲ್ಲಿ ಲಕ್ಷ್ಮೀ ದೇವಿ ಮಂದಿರ ಉದ್ಘಾಟನೆ




ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಬೆಕ್ಕಿನಕೇರಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಲಕ್ಷ್ಮೀ ದೇವಿ ಮಂದಿರದ ವಾಸ್ತುಶಾಂತಿ ಹಾಗೂ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭಾಗವಹಿಸಿ, ದೇವಸ್ಥಾನವನ್ನು ಉದ್ಘಾಟಿಸಿದರು.

ಗ್ರಾಮೀಣ ಕ್ಷೇತ್ರದಲ್ಲಿ ನೂರಕ್ಕೂ ಹೆಚ್ಚು ದೇವಸ್ಥಾನಗಳನ್ನು ಕಳೆದ 6 ವರ್ಷದಲ್ಲಿ ನಿರ್ಮಾಣ ಮಾಡಲಾಗಿದೆ. ಗ್ರಾಮೀಣ ಕ್ಷೇತ್ರದ ಚಿತ್ರಣ ಈ ಅವಧಿಯಲ್ಲಿ ಸಾಕಷ್ಟು ಬದಲಾಗಿದೆ. ಮುಂದಿನ ದಿನಗಳಲ್ಲಿ ಕ್ಷೇತ್ರವನ್ನು ಶೈಕ್ಷಣಿಕವಾಗಿ ಅಭಿವೃದ್ಧಿಪಡಿಸಲಾಗುವುದು. ಗ್ರಾಮೀಣ ಮಕ್ಕಳು ಉನ್ನತ ಶಿಕ್ಷಣ ಪಡೆಯುವಂತಹ ವಾತಾವರಣ ನಿರ್ಮಾಣ ಮಾಡಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಯುವರಾಜ ಕದಂ, ಜಯವಂತ ಸಾವಂತ, ನಾರಾಯಣ ಬಂಡಾರಗೆ, ಅರುಣ ಗಾವಡೆ, ಮಾರುತಿ ಖಾದರವಾಡ್ಕರ್, ನಾರಾಯಣ ಸಾವಂತ, ಮಲ್ಲಪ್ಪ ಗಾವಡೆ, ಗಾವಡು ಗಾವಡೆ, ನಾಗೇಶ ಬಾಳೇಕುಂದ್ರಿ, ನಾರಾಯಣ ಬಾಳೇಕುಂದ್ರಿ, ನಾರಾಯಣ ಬೆಳಗಾಂವ್ಕರ್, ಮಹಾದೇವ ಬಿ. ಚಬ್ಬುಬಾಯಿ ಕಾಂಬಳೆ, ಅರುಣ ಬೋಗನ್, ಮಲಪ್ರಭಾ ಗಾವಡೆ, ಬೇಬಿತಾಯಿ ಗಾವಡೆ, ಲಕ್ಷ್ಮೀ ಗಾವಡೆ, ಎಸ್. ಎಲ್. ಚೌಗುಲೆ, ಕಲ್ಪನಾ ಕಾಂಬಳೆ, ರಘುನಾಥ್ ಖಂಡೇಕರ್, ಮನೋಹರ್ ಬೆಳಗಾಂವ್ಕರ್, ಬಾಳಕೃಷ್ಣ ತೆರಸೆ ಹಾಗೂ ದೇವಸ್ಥಾನ ಸಮಿತಿಯ ಸದಸ್ಯರು ಇದ್ದರು.

## ಅಪರಿಚಿತ ಶವ ಪತ್ತೆ



ಬೆಳಗಾವಿ: ಬೆಳಗಾವಿ ಗೋವಾವೇಸ್ ರಸ್ತೆಯ ಹತ್ತಿರದ ಎಲ್‌ಐಸಿ ಕಚೇರಿ ಎದುರಗಡೆ ರಾಜೇಶ ಪಾಂಡೆ (45) ಎಂಬುವ ಅಪರಿಚಿತ ವ್ಯಕ್ತಿಯು ಅನಾರೋಗ್ಯದಿಂದ ಬಳಲುತ್ತಿದ್ದನ್ನು ಕಂಡು ಸಾರ್ವಜನಿಕರು ಹೆಚ್ಚಿನ ಚಿಕಿತ್ಸೆಗಾಗಿ ಬೆಳಗಾವಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಿಸದೆ ರಾಜೇಶ ಪಾಂಡೆ ಎಂಬ ವ್ಯಕ್ತಿಯು ಶುಕ್ರವಾರ (ಮಾ.01) ರಂದು ಮುಂಜಾನೆ 9 ಗಂಟೆಗೆ ಮೃತಪಟ್ಟಿರುತ್ತಾನೆ.

**ಮೃತನ ಚಹರೆ:**

ಮೃತನ ವಯಸ್ಸು 45 ಇರಬಹುದು ಎಂದು ಅಂದಾಜಿಸಲಾಗಿದ್ದು, ದುಂಡು ಮುಖ, ಉದ್ದ ಮೂಗು, ಎತ್ತರವಾದ ಹಣೆ, ಉದ್ದವಾದ ಕಪ್ಪು ಮತ್ತು ಬಿಳಿ ಬಣ್ಣದ ಕೂದಲು, ಚಾಕಲೇಟ್ ಬಣ್ಣದ ಹಾಫ್ ತೋಳಿನ ಟೀ ಶರ್ಟ ಧರಿಸಿರುತ್ತಾನೆ.

ಸದರಿ ಮೃತನ ವಾರಸುದಾರರು ಕಂಡು ಬಂದಲ್ಲಿ ತಿಲಕವಾಡಿ ಪೊಲೀಸ್ ಠಾಣೆಯ ದಾರವಾಣಿ 0831–2405236 ಸಂಖ್ಯೆಗೆ ಸಂಪರ್ಕಿಸಬಹು. ಅಥವಾ ಬೆಳಗಾವಿ ನಗರ ಪೊಲೀಸ್ ಕಂಟ್ರೋಲ್ ರೂಮಗೆ ಸಂಪರ್ಕಿಸಲು ಬೆಳಗಾವಿ ತಿಲಕವಾಡಿ ಪಿಎಸ್‌ಎಚ್‌ಓ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಬ್ಬರು ವೃದ್ಧರನ್ನು ಕೊಡಲಿಯಿಂದ ಕಡಿದ ಕಿರಾತಕ ಅರೆಸ್ಟ್

ಮುಂಬೈ: ಮಾನಸಿಕ ಅಸ್ವಸ್ಥನೊಬ್ಬ ಕೊಡಲಿಯಿಂದ ಇಬ್ಬರು ವೃದ್ಧರನ್ನು ಕಡಿದು ಕೊಲೆ ಮಾಡಿರುವ ಕೃತ್ಯ ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ಕೂಡನ್ ಗ್ರಾಮದಲ್ಲಿ ನಡೆದಿದೆ. ಕಳೆದ ಎರಡು ದಿನಗಳಿಂದ ಕೂಡನ್ ಗ್ರಾಮದಲ್ಲಿ ಅನುಮಾನಾಸ್ಪದವಾಗಿ ಯುವಕನೊಬ್ಬ ಓಡಾಡುತ್ತಿದ್ದನು. ಆದರೆ ಏಕಾಏಕಿ ವಯೋವೃದ್ಧನ ಮೇಲೆ ಎರಗಿದ ಆರೋಪಿಯು ಕೊಡಲಿಯಿಂದ ಹಲ್ಲೆ ನಡೆಸಿ, ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಮೃತದೇಹದ ಮುಂದೆ ಕುಳಿತುಕೊಂಡಿದ್ದಾನೆ. ಇದೇ ವೇಳೆ ಮೃತನ ಸಹೋದರ ಆತನನ್ನು ಹುಡುಕುತ್ತಾ ಅದೇ ಸ್ಥಳಕ್ಕೆ ಬಂದಿದ್ದಾನೆ. ಆಗ ಅನುಮಾನಗೊಂಡ ಆರೋಪಿಯು ಮೃತನ ಅಹೋದರನ ಮೇಲೆರಗಿ ಕೊಡಲಿಯಿಂದ ಹೇಗೆಂದರೆ ಹಾಗೇ ಹಲ್ಲೆ ಮಾಡಿ ಕೊಲೆ ಮಾಡಿದ್ದಾನೆ. ಇದನ್ನು ನೋಡಿದ ಗ್ರಾಮಸ್ಥರು ಕೂಗಲು ಪ್ರಾರಂಭಿಸುತ್ತಿದ್ದಂತೆ ಸ್ಥಳದಲ್ಲೇ ಹಂತಕನು ಓಡಿ ಹೋಗಿ ಅವಿತುಕೊಂಡಿದ್ದಾನೆ ಎಂದು ಹೇಳಲಾಗಿದೆ. ಓಡಿ ಹೋದ ಆರೋಪಿಯು ಕರೆವೊಂದರ ಜವುಗು ಪ್ರದೇಶದಲ್ಲಿ ಅವಿತುಕೊಂಡಿದ್ದ. ತಕ್ಷಣ ಪೊಲೀಸರಿಗೆ ಮಾಹಿತಿ ತಿಳಿಸಿದ್ದು ಘಟನಾ ಸ್ಥಳಕ್ಕೆ 150ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ದೌಡಾಯಿಸಿ ಕಾರ್ಯಾಚರಣೆ ಆರಂಭಿಸಿದ್ದಾರೆ. ಬಚ್ಚಿಟ್ಟುಕೊಂಡಿದ್ದ ಆರೋಪಿಯನ್ನು ಪೊಲೀಸರು ಸೆರೆ ಹಿಡಿದು ಎಳೆದು ತಂದಿದ್ದಾರೆ. ಆರೋಪಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಬಳಿಕ ಆತ ನಿಜವಾಗಿಯೂ ಮಾನಸಿಕ ಅಸ್ವಸ್ಥನೋ, ಅಲ್ಲವೋ ಅನ್ನೋದನ್ನು ನಿಖರವಾಗಿ ತಿಳಿದು ಬರಲಿದೆ ಎಂದು ಪೊಲೀಸರು ಹೇಳಿದ್ದಾರೆ. ಕೊಲೆಗೆ ನಿಖರವಾಗಿ ತಿಳಿದು ಬಂದಿಲ್ಲ, ಕೊಲೆ ಮಾಡಿದ ಆರೋಪಿ ಯಾರೆಂಬುದು ತನಿಖೆಯಿಂದ ಗೊತ್ತಾಗಲಿದೆ ಎಂದಿದ್ದಾರೆ.

# ಮೋದಿ ಸರಕಾರದ ಯೋಜನೆಗಳನ್ನು ಜನರಿಗೆ ಮುಟ್ಟಿಸಿ: ಅರವಿಂದ ಪಾಟೀಲ




ಗೋಕಾಕ್: ಕೇಂದ್ರ ಸರಕಾರವು ಜಾರಿಗೆ ತಂದಿರುವ ಹಲವಾರು ಮಹತ್ವಾಕಾಂಕ್ಷೆಯ ಯೋಜನೆಗಳನ್ನು ಮತದಾರರ ಮುಂದೆ ಹೇಳಿ, ಅವರಿಂದ ಬಿಜೆಪಿಗೆ ಮತ ಹಾಕಿಸುವ ಕೆಲಸ ಮಾಡುವಂತೆ ಫಲಾನುಭವಿಗಳ ಅಭಿಯಾನದ ಜಿಲ್ಲಾ ಸಂಚಾಲಕ ಅರವಿಂದ ಪಾಟೀಲ ಹೇಳಿದರು.

ಇಲ್ಲಿನ ಎನ್‌ಎಸ್‌ಎಫ್ ಕಾರ್ಯಾಲಯದಲ್ಲಿ ಅರಭಾವಿ, ಗೋಕಾಕ್ ಮಂಡಲದವರು ಜಂ–ಟಿಯಾಗಿ ಶುಕ್ರವಾರದಂದು ಹಮ್ಮಿಕೊಂಡಿದ್ದ ಫಲಾನುಭವಿಗಳ ಸಂಪರ್ಕ ಅಭಿಯಾನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಕಾರ್ಯಕರ್ತರು ದುಡಿಯಲು ತಿಳಿಸಿದರು.

ದೇಶದ ಜನಮೆಚ್ಚಿದ ಹೆಮ್ಮೆಯ ಪ್ರಧಾನಿ ನಮ್ಮ ನರೇಂದ್ರ ಮೋದಿಯವರು. ಕಳೆದ ಎರಡು ಅವಧಿಯಿಂದ ಈ ದೇಶದ ಚುಕ್ಕಾಣಿ ಹಿಡಿದು ಶಕ್ತಿ ಶಾಲಿ ಭಾರತ ನಿರ್ಮಾಣ–ಕ್ಕೆ ಅವಿರತವಾಗಿ ಶ್ರಮಿಸುತ್ತಿದ್ದಾರೆ. ದೇಶದ ಎಲ್ಲ ಜನಾಂಗದವರ ಅಭ್ಯುದಯಕ್ಕೆ ನೂರಾರು ಜನಪರ– ರೈತಪರ– ಮಹಿಳಾಪರ ಯೋಜನೆಗಳನ್ನು ಸಾಕಾರಗೊಳಿಸಿದ್ದಾರೆ. ಅಂತಹ ಯೋಜನೆಗಳ ಫಲಾನುಭವಿಗಳ ಸಂಪರ್ಕ ಸಾಧಿಸುವ ಕೆಲಸ ನಡೆಯುತ್ತಿದೆ. ಫಲಾನುಭವಿಗಳ ಕುಟುಂಬದ ಸದಸ್ಯರನ್ನು ಭೇಟಿ ಮಾಡಿ ನಮ್ಮ ಕೇಂದ್ರ ಸರ್ಕಾರದ ಯೋಜನೆಗಳನ್ನು ವಿವರಿಸಿ ನಮ್ಮ ಪಕ್ಷದ ಅಭ್ಯರ್ಥಿಗೆ ಮತ ಹಾಕಿಸುವ ಜವಾಬ್ದಾರಿಯನ್ನು ಕಾರ್ಯಕರ್ತರು ಹೊತ್ತುಕೊಳ್ಳುವಂತೆ ಪಾಟೀಲ ಹೇಳಿದರು.

ಅರಭಾವಿ ಮಂಡಲದ ಸಂಚಾಲಕ ಗೋವಿಂದ ಕೊಪ್ಪದ ಮಾತನಾಡಿ, ಇದೇ ಎಪ್ರಿಲ್ ತಿಂಗಳಲ್ಲಿ ಜರುಗುವ ಸಂಸತ್ ಚುನಾವಣೆಯಲ್ಲಿ ಮೋದಿ ಮತ್ತೊಮ್ಮೆ ಅಧಿಕಾರ ಹಿಡಿಯುವುದು ಈಗಾಗಲೇ ಖಾತ್ರಿಯಾಗಿದೆ. ಇಡೀ ವಿಶ್ವದಲ್ಲೇ ನರೇಂದ್ರ ಮೋದಿಯವರು ಜನಪ್ರಿಯ ನಾಯಕರಾಗಿದ್ದಾರೆ. ಕೊವಿಡ್ ಸಂಕಷ್ಟದ ವೇಳೆಯಲ್ಲಿ ಪ್ರತಿಯೊಬ್ಬ ನಾಗರೀಕನಿಗೂ ಉಚಿತ ಲಸಿಕೆಗಳನ್ನು ನೀಡಲಾಗಿದೆ. ಕಳೆದ ಚುನಾವಣೆಯಲ್ಲಿ ನೀಡಿದ ಆಶ್ವಾಸನೆಯಂತೆ ಅಯೋಧ್ಯೇಯಲ್ಲಿ ರಾಮ ಮಂದಿರವನ್ನು ಪ್ರತಿಷ್ಠಾಪಿಸಲಾಗಿದೆ. ಕಾಶ್ಮೀರದಲ್ಲಿ ಆರ್ಟಿಕಲ್ 370 ಮತ್ತು 35ಎ ರದ್ಧತಿ, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್, ಆತ್ಮನಿರ್ಭರ, ಉಜ್ವಲಾ ಯೋಜನೆ, ಮೇಕ್ ಇನ್ ಇಂಡಿಯಾ, ಅಟಲ್ ಪಿಂಚಣಿ ಯೋಜನೆ ಸೇರಿದಂತೆ ನೂರಾರು ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಬಿಜೆಪಿ ಸರಕಾರವು ರೂಪಿಸಿದೆ ಎಂದು ವಿವರಿಸಿದರು.

ಶಾಸಕದ್ವಯರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿಯವರ ಸಮರ್ಥ ಮುಖಂಡತ್ವದಲ್ಲಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಬಿಜೆಪಿ ಅಭ್ಯರ್ಥಿಗೆ ಅತೀ ಹೆಚ್ಚಿನ ಮುನ್ನಡೆ ಮತಗಳನ್ನು ಕೊಟ್ಟು ಭಾರೀ ಅಂತರದಿಂದ ಗೆಲ್ಲಿಸಿಕೊಡಲಾಗುವುದು ಎಂದು ಅವರು ಹೇಳಿದರು.

ಅಧ್ಯಕ್ಷತೆಯನ್ನು ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ ವಹಿಸಿದ್ದರು. ವೇದಿಕೆಯಲ್ಲಿ ಜಿಲ್ಲಾ ಸಹ ಸಂಚಾಲಕಿ ಸುವರ್ಣ ಪಾಟೀಲ, ಗೋಕಾಕ್ ಗ್ರಾಮೀಣ ಸಂಚಾಲಕ ಪುಂಡಲೀಕ ವಣ್ಣೂರ, ರಾಜು ಮುಂಡಾನೆ, ಅಶೋಕ ಪಾತ್ರೋಟ, ಉಭಯ ಕ್ಷೇತ್ರಗಳ ಬಿಜೆಪಿ ಪದಾಧಿಕಾರಿಗಳು, ಮಹಾ ಶಕ್ತಿ, ಶಕ್ತಿ ಕೇಂದ್ರಗಳ ಪ್ರಮುಖರು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪರಸಪ್ಪ ಬಬಲಿ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089